ವಿಜಯಪುರ | ಸಂಪುಟ 02 | ಸಂಚಿಕೆ 180 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಸೆಪ್ಟೆಂಬರ್ 10, 2024



"ನಾನು ಪ್ರಚಾರಪ್ರೀಯನಲ್ಲ. ಸದ್ದಿಲ್ಲದೆ ಅಭಿವೃದ್ಧಿ ಕೆಲಸ ಮಾಡಿ ಮುಗಿಸಿ ತೃಪ್ತಿಪಡುವುದು ನನ್ನ ಸ್ವಭಾವ. ಕಳೆದ 10 ವರ್ಷಗಳಲ್ಲಿ ವಿಜಯಪುರ ಜಿಲ್ಲೆಯ ಅಭಿವೃದ್ಧಿಗಾಗಿ ರೂ.1.10 ಲಕ್ಷ ಕೋಟಿ ಅನುದಾನ ತಂದಿದ್ದೇನೆ."

» - ರಮೇಶ ಜಿಗಜಿಣಗಿ
ಸಂಸದರು,ವಿಜಯಪುರ

## ವಿವಿಧ ಬೇಡಿಕೆಗಳ ಈಡೇರಿಕೆಗೆ ಟಿಪಿಜೆಪಿ ಪದಾಧಿಕಾರಿಗಳ ಧರಣಿ ಸತ್ಯಾಗ್ರಹ

# ಹತ್ತನೆ ದಿನಕ್ಕೆ ಕಾಲಿರಿಸಿದ ಟಿಪಿಜೆಪಿ ಅನಿಷ್ಟಾವಧಿ ಧರಣಿ



ವಿಜಯಪುರ: ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ವಂಚನೆ ಸಂತ್ರಸ್ತ ಠೇವಣಿದಾರರ ಕುಟುಂಬ (ಟಿಪಿಜೆಪಿ) ಪದಾಧಿಕಾರಿಗಳು ವಿಜಯಪುರ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದ ಮುಂದೆ ಹಮ್ಮಿಕೊಂಡ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಸೋಮವಾರ 9ನೇ ದಿನಕ್ಕೆ ಕಾಲಿಟ್ಟಿದೆ.

ಈ ಸಂದರ್ಭದಲ್ಲಿ ಟಿಪಿಜೆಪಿ ಸಂಘಟನೆಯ ರಾಜ್ಯಾಧ್ಯಕ್ಷ ಅಪ್ಪಾಸಾಹೇಬ ಬುಗಡೆ ಮಾತನಾಡಿ, ಪಿಎಸಿಎಲ್, ಘರೀಮಾ, ಸಾಯಿ ಪ್ರಸಾದ, ಅಗ್ರಿ ಗೋಲ್ಡ್, ಸಮೃದ್ಧಿ ಜೀವನ, 7 ಹಿಲ್ಸ್ , ಮೈತ್ರಿ, ಪ್ಯಾನ್ ಕಾರ್ಡ್ ಕ್ಲಬ್ಸ್ , ಹಿಂದೂಸ್ತಾನ ಇನ್ಫಾಟೆಕ್ಚರ್ ಲಿಮಿಟೆಡ್, ಪ್ಯೂಚರ್ ಮೇಕರ್ ಚಿಟ್ ಪಂಡ್ ಕಂಪನಿಗಳು ಸೇರಿದಂತೆ ಏಕಕಾಲದಲ್ಲಿ 2014 ರಲ್ಲಿ ಕೇಂದ್ರ ಸರ್ಕಾರ ಬಂದ್‌ಗೊಳಿಸಿದೆ. ಆದರೂ ಕಳೆದ 10 ವರ್ಷ ಗತಿಸಿದರೂ, ಗ್ರಾಹಕರಿಗೆ ಹಣ ತಲುಪಿಸುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದರು. ಸಾಕಷ್ಟು ಕಂಪನಿಗಳ ಮಾಲಿಕರು ಸಾಕಷ್ಟು ಆಸ್ತಿಗಳನ್ನು ಮಾಡಿಕೊಂಡಿದ್ದಾರೆ. ಮಾಲಿಕರ ಆಸ್ತಿಗಳನ್ನು ಮುಟ್ಟುಗೋಲನ್ನು ಹಾಕಿಕೊಂಡು ಗ್ರಾಹಕರಿಗೆ ಹಣ ಮರಳಿಸಿ ನ್ಯಾಯ ಒದಗಿಸಿಕೊಡಬೇಕು. ಕೇಂದ್ರ ಸರ್ಕಾರ ಬಡ್ಸ್ 2019 ರ ಪ್ರಕಾರ ಗ್ರಾಹಕರಿಗೆ 180 ದಿನಗಳಲ್ಲಿ ಗ್ರಾಹಕರಿಗೆ ಪಾವತಿಸಬೇಕು ಎನ್ನುವ ನಿಯಮಿದ್ದರೂ ನಿಯಮವನ್ನುಗಾಳಿಗೆ ತೂರಿದ್ದಾರೆ. ಬಡ್ಸ್ ಸರ್ಕಾರ ಕೂಡಲೇ ಕಟ್ಟು ನಿಟ್ಟಾಗಿ ಜಾರಿಗೆ ಗೊಳಿಸಬೇಕು. ಗ್ರಾಹಕರಿಗೆ ನ್ಯಾಯ ಒದಗಿಸಿಕೊಡಬೇಕು ಎಂದು ಒತ್ತಾಯಿಸಿದರು. ನಮಗೆ ನ್ಯಾಯ ಸಿಗುವವರೆಗೂ ಈ ಅನಿರ್ಧಿಷ್ಟಾವಧಿ ಸತ್ಯಾಗ್ರಹ ನಿರಂತರವಾಗಿರುತ್ತದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಶಿವಶರಣ ಬಿ. ಸಿನ್ನೂರ ಮಾತನಾಡಿ, ಉಪಾಧ್ಯಕ್ಷರಾದ ಸಿದ್ದಣ್ಣ ಹಡಲಗೇರಿ, ಕಾರ್ಯದರ್ಶಿ ರಾಜಶೇಖರ ಕೆ.ದೊಡಮನಿ, ತಾಲೂಕಾ ಮುಖಂಡರಾದ ಲಕ್ಷ್ಮೀ ಪಾಟೀಲ, ಲಾಲಸಾಬ ವಾಲಿಕಾರ, ಆರ್.ಪಿ.ಮಹೀಂದ್ರಕರ, ಎಲ್.ಬಿ.ಚವ್ಹಾಣ, ಬಾಬು ಪಟೇಲ ಬಿರಾದಾರ, ಆರ್.ಬಿ. ನಧಾಪ, ಗೌಡಪ್ಪಗೌಡ ಕಂಠಿ, ಮಂಜುಕುಮಾರ ಕಾಂಬಳೆ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

## ನೂತನ ಅಧ್ಯಕ್ಷರಾಗಿ ಶಾಂತವೀರ ಬಿರಾದಾರ, ಉಪಾಧ್ಯಕ್ಷರಾಗಿ ರಾಜಣ್ಣ ನಾರಾಯಣಕರ ಅವಿರೋಧ ಆಯ್ಕೆ।

# ಸಿಂದಗಿ ಪುರಸಭೆ ಗದ್ದುಗೆ ಕಾಂಗ್ರೆಸ್ ಪಾಲು: ಕೈಹಿಡಿದ ಜೆಡಿಎಸ್



ಸಿಂದಗಿ: ತೀವ್ರ ಕುತೂಹಲ ಕೆರಳಿದ್ದ ಸಿಂದಗಿ ಪುರಸಭೆಯ ಎರಡನೆಯ ಅವಧಿಗೆ ಒಟ್ಟು 23 ಸದಸ್ಯರಿರುವ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆ ಸೋಮವಾರ ಜರುಗಿತು. ಪುರಸಭೆಯ ಎರಡೂ ಸ್ಥಾನಗಳು ಸಾಮಾನ್ಯ ವರ್ಗಕ್ಕೆ ಮೀಸಲಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ 14ನೇ ವಾರ್ಡ್ ಸದಸ್ಯ ಶಾಂತವೀರ ಸಿದ್ದಪ್ಪ ಬಿರಾದಾರ ಒಬ್ಬರೇ ನಾಮಪತ್ರ ಸಲ್ಲಿಸಿದ್ದರು. ಮತ್ತು ಸಾಮಾನ್ಯ ಮೀಸಲಾತಿ ಇರುವ ಉಪಾಧ್ಯಕ್ಷ ಸ್ಥಾನಕ್ಕೆ 18ನೇ ವಾರ್ಡ್ ಸದಸ್ಯ ರಾಜಣ್ಣ ಧರ್ಮಣ್ಣ ನಾರಾಯಣಕರ ಒಬ್ಬರೇ ನಾಮಪತ್ರ ಸಲ್ಲಿಸಿದ್ದರು. ಹೀಗಾಗಿ ಅವರಿಬ್ಬರೂ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಒಟ್ಟು 23 ಜನ ಸದಸ್ಯರು ಅದರಲ್ಲಿ ಚುನಾವಣಾ ಪ್ರಕ್ರಿಯೆಯಲ್ಲಿ 18 ಜನ ಸದಸ್ಯರು ಮಾತ್ರ ಹಾಜರಿದ್ದು, 5 ಜನ ಸದಸ್ಯರು ಗೈರಾಗಿದ್ದರು. ಕೋರಂ ಭರ್ತಿಗೆ 9 ಜನ ಸದಸ್ಯರು ಇರಬೇಕು ಚುನಾವಣಾ ಪ್ರಕ್ರಿಯೆಯಲ್ಲಿ 18 ಸದಸ್ಯರಿರುವ ಕಾರಣ ಚುನಾವಣೆ ಪೂರ್ಣಗೊಂಡಿದೆ ಎಂದು ಚುನಾವಣಾಧಿಕಾರಿ ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ ತಿಳಿಸಿದರು.

ಈ ಸಂದರ್ಭದಲ್ಲಿ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಶಾಂತವೀರ ಬಿರಾದಾರ ಮಾಧ್ಯಮದವರೊಂದಿಗೆ ಮಾತನಾಡಿ, ಅಧ್ಯಕ್ಷನಾಗಬೇಕು ಎನ್ನುವ ಬಯಕೆ ಬಹು ದಿನಗಳಿಂದ ಇತ್ತು. ಶಾಸಕ ಅಶೋಕ ಮನಗೂಳಿ ಅವರ ನೇತೃತ್ವದಲ್ಲಿಯೇ ನಾನು ಅಧ್ಯಕ್ಷನಾಗಿದ್ದು, ನನಗೆ ಬೆಂಬಲ ನೀಡಿದ ಎಲ್ಲ ಸದಸ್ಯರಿಗೂ ನಾನು ಅಭಿನಂದನೆ ಸಲ್ಲಿಸುವೆ. ಶಾಸಕರ ಮಾರ್ಗದರ್ಶನದಲ್ಲಿ ಅವರ ಸಹಕಾರದಿಂದ ಸರ್ಕಾರದ ಮಟ್ಟದಲ್ಲಿ ಹೋರಾಟ ಮಾಡಿ ಪಕ್ಷ ಭೇದ ಮರೆತು ಎಲ್ಲ ಸದಸ್ಯರನ್ನು ವಿಶ್ವಾಸಕ್ಕೆ ತಗೆದುಕೊಂಡು ಪಟ್ಟಣದ ಅಭಿವೃದ್ದಿಗೆ ಹೆಚ್ಚಿನ ಆದ್ಯತೆ ನೀಡಲು ಮುಂದಾಗುತ್ತೇನೆ ಎಂದರು.

ಈ ವೇಳೆ ನೂತನ ಉಪಾಧ್ಯಕ್ಷ ರಾಜಣ್ಣ ನಾರಾಯಣಕರ ಮಾತನಾಡಿ, ದಿ. ಎಮ್.ಸಿ.ಮನಗೂಳಿ ಅವರ ಸಹಕಾರದಿಂದ ನಾನು 2ನೆಯ ಬಾರಿ ಜೆಡಿಎಸ್ ಪಕ್ಷದಿಂದ ಸದಸ್ಯನಾಗಿ ಆಯ್ಕೆಯಾಗಿದ್ದು, ಪ್ರಸ್ತುತ ನಾನು ಜೆಡಿಎಸ್ ಪಕ್ಷವನ್ನು ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರಿದ್ದೇನೆ. ಶಾಸಕರ, ನೂತನ ಅಧ್ಯಕ್ಷರು ಸೇರಿದಂತೆ ಎಲ್ಲ ಸದಸ್ಯರ ಮಾರ್ಗದರ್ಶನದಲ್ಲಿ ಪಟ್ಟಣದ ಅಭಿವೃದ್ದಿಗೆ ಬದ್ದ ಎಂದರು.

ಈ ವೇಳೆ ಸಿಂದಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಪೂಜಾರಿ ಮಾತನಾಡಿದರು.

ಈ ಸಂದರ್ಭದಲ್ಲಿ ಸದಸ್ಯರಾದ ಪ್ರತಿಭಾ ಕಲ್ಲೂರ, ಉಮಾದೇವಿ ಸುಲ್ಪಿ, ಕಲಾವತಿ ಕಡಕೋಳ, ಬಸವರಾಜ ಯರನಾಳ, ಹಣಮಂತ ಸುಣಗಾರ, ಬಾಷಾಸಾಬ ತಾಂಬೋಳಿ, ಖೈರುನಬಿ ನಾಟೀಕಾರ, ಹಾಸಿಂಪೀರ ಆಳಂದ, ಪಾರ್ವತಿ ದುರ್ಗಿ, ಮಹಾಂತೇಶ ಬಿರಾದಾರ, ಡಾ.ಶಾಂತವೀರ ಮನಗೂಳಿ, ಭೀಮಣ್ಣ ಕಲಾಲ, ತಹಶೀನ ಮುಲ್ಲಾ, ಗೊಲ್ಲಾಳ ಬಂಕಲಗಿ, ಶರಣಗೌಡ ಪಾಟೀಲ, ಮಹಾದೇವಿ ನಾಯ್ಕೋಡಿ, ಮುಖ್ಯಾಧಿಕಾರಿ ಸುರೇಶ ನಾಯಕ ಸೇರಿದಂತೆ ಇತರರು ಇದ್ದರು.

ಈ ವೇಳೆ ಚುನಾವಣಾ ಸಿಬ್ಬಂದಿ, ಪುರಸಭೆಯ ಸಿಬ್ಬಂದಿ ಇದ್ದರು. ಪಿಎಸ್ಐ ಆರೀಫ್ ಮುಷಾಪುರಿ ಅವರ ನೇತೃತ್ವದಲ್ಲಿ ಪೊಲೀಸ್ ಇಲಾಖೆಯ ಸಿಬ್ಬಂದಿ ಪುರಸಭೆಯ ಸುತ್ತಲೂ ಬಿಗಿ ಭದ್ರತೆ ಕೈಗೊಂಡಿದ್ದರು.




" ಪುರಸಭೆಗೆ ನೂತನವಾಗಿ ಆಯ್ಕೆಗೊಂಡ ಅಧ್ಯಕ್ಷ ಹಾಗೂ ಉಪಾಧ್ಯಕ್ಷರು ಎಲ್ಲ ಸದಸ್ಯರನ್ನು ವಿಶ್ವಾಸಕ್ಕೆ ತಗೆದುಕೊಂಡು ನಗರದ ಸಂಪೂರ್ಣ ಅಭಿವೃದ್ದಿಯೆಡೆಗೆ ಹೆಚ್ಚಿನ ಗಮನ ಹರಿಸಬೇಕು. ರಾಜ್ಯದಲ್ಲಿಯೇ ಸಿಂದಗಿ ನಗರವನ್ನು ಸ್ವಚ್ಚತೆಯಿಂದ ಕೂಡಿದ ನಗರ ಎಂದೂ ಕರೆಯಿಸಿಕೊಳ್ಳುವಲ್ಲಿ ಶ್ರಮಿಸಬೇಕು. ಸರಕಾರ ಮಟ್ಟದಲ್ಲಿ ನಾನು ಹೋರಾಟ ಮಾಡಿ ಪಟ್ಟಣದ ಅಭಿವೃದ್ದಿಗೆ ಹೆಚ್ಚಿನ ಅನುದಾನ ತರುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಯಾವುದೇ ಕಾಲಕ್ಕೂ ನಗರದ ಅಭಿವೃದ್ದಿ ವಿಚಾರದಲ್ಲಿ ಸದಸ್ಯರು ಭಿನ್ನಾಭಿಪ್ರಾಯ ತಾಳದೇ, ಎಲ್ಲರೂ ಪಕ್ಷಾತೀತವಾಗಿ ಸಹಕಾರದಿಂದ ಕಾರ್ಯ ಮಾಡಬೇಕು."

» - ಅಶೋಕ ಮನಗೂಳಿ
ಶಾಸಕರು, ಸಿಂದಗಿ.

## ಜಯ ಕರ್ನಾಟಕ ಸಂಘಟನೆ ಆಗ್ರಹ । ಜಿಲ್ಲಾಧಿಕಾರಿಗೆ ಮನವಿ

# ವಿಜಯಪುರ ರೈಲ್ವೆ ನಿಲ್ದಾಣಕ್ಕೆ ಶ್ರೀ ಸಿದ್ದೇಶ್ವರ ಶ್ರೀಗಳ ಹೆಸರಿಡಿ



ವಿಜಯಪುರ: ನಗರದ ಅಭಿವೃದ್ದಿ ಹಾಗೂ ನಾಮಕರಣ ಮಾಡುವ ಬಗ್ಗೆ ಜಯ ಕರ್ನಾಟಕ ಸಂಘಟನೆಯ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ನಗರವು ದಿನದಿಂದ ದಿನಕ್ಕೆ ಅಭಿವೃದ್ದಿ ಹೊಂದುತ್ತಲಿದ್ದು, ಜಿಲ್ಲೆಯು ಬಸವೇಶ್ವರರು ಜನಿಸಿದ ಜಿಲ್ಲೆಯಾಗಿದೆ. ಜಿಲ್ಲೆಯಲ್ಲಿ ನಡೆದಾಡುವ ದೇವರು ಶ್ರೀ ಸಿದ್ದೇಶ್ವರ ಶ್ರೀಗಳು ನಡೆದಾಡಿದ ನಾಡಾಗಿದೆ. ಈ ಎಲ್ಲ ದೃಷ್ಟಿಕೋನದಿಂದ ವಿಜಯಪುರ ನಗರದ ಅಭಿವೃದ್ದಿ ಹಾಗೂ ನಗರದ ರೈಲ್ವೆ ನಿಲ್ದಾಣಕ್ಕೆ ಶ್ರೀ ಸಿದ್ದೇಶ್ವರ ಶ್ರೀಗಳ ಹೆಸರು ಮರುನಾಮಕರಣ ಮಾಡಬೇಕು. ವಿಮಾನ ನಿಲ್ದಾಣಕ್ಕೆ ಮಹಾತ್ಮಾ ಬಸವೇಶ್ವರರ ಹೆಸರು ನಾಮಕರಣ ಮಾಡುವಂತಾಗಬೇಕು. ಮಹಾತ್ಮಗಾಂಧಿ ವೃತ್ತವನ್ನು ನವೀಕರಣಗೊಳಿಸಿ ಕಂಚಿನ ಮೂರ್ತಿ ಪ್ರತಿಷ್ಠಾಪನೆ ಮಾಡಬೇಕು. ಕಿತ್ತೂರ ರಾಣಿ ಚೆನ್ನಮ್ಮ ರಂಗಮಂದಿರವನ್ನು ಪುನಃ ಪ್ರಾರಂಭವಿಸಿ ಕಲಾವಿದರಿಗೆ ಅವಕಾಶ ಹಾಗೂ ನಾಟಕ ಪ್ರದರ್ಶನಗೊಳಿಸುವಂತೆ ಮಾಡಲು ಹಾಗೂ ಇನ್ನಿತರ ಅಭಿವೃದ್ದಿ ಕಾರ್ಯಗಳನ್ನು ಕೈಗೊಂಡು ಮಾದರಿ ಜಿಲ್ಲೆಯನ್ನಾಗಿ ಮಾಡುವಂತಾಗಬೇಕು. ಹಾಗೂ ಈ ಅಭಿವೃದ್ದಿ ಕಾಮಗಾರಿಗಳನ್ನು ಒಂದು ತಿಂಗಳ ಒಳಗಡೆ ಕೈಗೊಳ್ಳಬೇಕು. ಕೈಗೊಳ್ಳದೇ ಹೋದಲ್ಲಿ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಮುಂದೆ ಧರಣಿ ಸತ್ಯಾಗ್ರಹ ಕೈಗೊಳ್ಳಲಾಗುವದು ಎಂದು ಆಗ್ರಹಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಸಂಗಮೇಶ ದಾಶ್ಯಾಳಗೌಡ, ಮುಕ್ಕದಸ್ ಇನಾಮದಾರ, ಆನಂದ ಹುನ್ನೂರ, ಪ್ರವೀಣ ಇಜೇರಿ, ಸದಾಶಿವ ಚವ್ಹಾಣ, ಮೀನಾ ಪ್ಹಾರ, ಅನ್ನಪೂರ್ಣ ಕೋಳಿ, ಸಿದರಾಜ ಹೊಳಿ, ರಿಯಾಜ ಪಾಂಡು, ವಿರೇಶ ಪಾಟೀಲ, ಉಮೇಶ ರುದ್ರಮುನಿ, ಗಾಯತ್ರಿ ರೆಡ್ಡೇಕರ, ಬೇಬಿ ತಳವಾರ, ಮಲ್ಲಮ್ಮ ಲಮಾಣಿ, ಸುಜಾತಾ ಪೂಜಾರಿ, ಪಿಂಟು ಗೊಬ್ಬೂರ, ಶಿವಾಜಿ ಪಾಟೀಲ, ಇನ್ನಿತರರು ಇದ್ದರು.

## ಇಟ್ಟಂಗಿಹಾಳದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ ಜಿ.ಪಂ ಸಿಇಓ ರಿಷಿ ಆನಂದ ಸೂಚನೆ

# ಅಂಗನವಾಡಿ ಕೇಂದ್ರದಲ್ಲಿ ನಿತ್ಯ ಸ್ವಚ್ಛತೆ ಕಾಪಾಡಿಕೊಳ್ಳಿ



ವಿಜಯಪುರ: ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಅವರು ತಿಕೋಟಾ ತಾಲೂಕಿನ ಲೋಹಗಾಂವ ಗ್ರಾಮ ಪಂಚಾಯತಿ ವ್ಯಾಪ್ತಿಯ ಇಟ್ಟಂಗಿಹಾಳ ಗ್ರಾಮದ ಸರ್ಕಾರಿ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಅಂಗನವಾಡಿ ಕೇಂದ್ರದ ಆಕರ್ಷಣೀಯ ಮತ್ತು ಸುಸಜ್ಜಿತ ಕಟ್ಟಡ ಮತ್ತು ಮಕ್ಕಳ ಕಲಿಕೆ, ವಿವಿಧ ಕ್ರಿಯಾ ಚಟುವಟಿಕೆಗಳನ್ನು ವೀಕ್ಷಿಸಿದರು. ಅಲ್ಲಿರುವ ಮಕ್ಕಳೊಂದಿಗೆ ಸಂವಾದ ನಡೆಸಿ, ಮಕ್ಕಳಿಗೆ ವಿವಿಧ ಪ್ರಶ್ನೆಗಳನ್ನು ಕೇಳಿ ಅವರಿಂದ ಉತ್ತರ ಪಡೆದುಕೊಂಡರು. ಅಂಗನವಾಡಿ ಕೇಂದ್ರದ ಮಕ್ಕಳಿಗಾಗಿ ಸಿದ್ಧಪಡಿಸಿದ ಆಹಾರದ ಗುಣಮಟ್ಟವನ್ನು ಪರಿಶೀಲನೆ ನಡೆಸಿದರು. ಮಕ್ಕಳಿಗೆ ನಿರಂತರವಾಗಿ ಆರೋಗ್ಯ ತಪಾಸಣೆ ಕೈಗೊಳ್ಳಲು ಅಂಗನವಾಡಿ ಕಾರ್ಯಕರ್ತೆಯರಿಗೆ ಸೂಚಿಸಿದರು. ಬೋಧನಾ ಉಪಕರಣದಲ್ಲಿ ವೈವಿಧ್ಯತೆಯನ್ನು ಬಳಸಿಕೊಂಡು ಮಕ್ಕಳಲ್ಲಿ ಕ್ರಿಯಾತ್ಮಕ ಚಟುವಟಿಕೆ ಬೆಳೆಸಬೇಕು ಎಂದು ಹೇಳಿದರು. ನಂತರ, ಅಂಗನವಾಡಿ ಕೇಂದ್ರದ ಒಳಾಂಗಣ ಅತ್ಯುತ್ತಮವಾಗಿ ನಿರ್ವಹಿಸಿದ್ದೀರಿ, ಅದೇ ರೀತಿ ಕೇಂದ್ರದ ಹೊರಾಂಗಣ ಆಟದ ಮೈದಾನವನ್ನೂ ಸಹ ಉತ್ತಮವಾಗಿ ಅಭಿವೃದ್ಧಿಪಡಿಸಿ, ಸ್ವಚ್ಛತೆಯಿಂದ ನಿರ್ವಹಣೆ ಮಾಡುವುದು. ಜೊತೆಗೆ ಆವರಣದಲ್ಲಿ ಲಭ್ಯವಿರುವ ಸ್ಥಳದಲ್ಲಿ ಚಿಕ್ಕ ಉದ್ಯಾನವನವನ್ನು ನಿರ್ಮಿಸುವುದು, ಕಟ್ಟಡಕ್ಕೆ ಸಂಪೂರ್ಣವಾಗಿ ಮಕ್ಕಳಿಗೆ ಆಕರ್ಷಣೀಯ ಚಿತ್ರಗಳನ್ನು ಬಿಡಿಸಿದ್ದು ಜೊತೆಗೆ ಕಿಟಕಿ-ಬಾಗಿಲಿಗೆ ಬಣ್ಣ ಮಾಡಿ ಆಕರ್ಷಕಗೊಳಿಸಬೇಕು. ಕೇಂದ್ರದಲ್ಲಿ ಮಕ್ಕಳಿಗೆ ವಿಭಿನ್ನವಾದ ಹಾಗೂ ಹೊಸ ಆಟಿಕೆ ಸಾಮಗ್ರಿಗಳನ್ನು ಖರೀದಿಸುವುದು ಹಾಗೂ ಈಗಾಗಲೇ ಇರುವ ಆಟಿಕೆ ಸಾಮಗ್ರಿಗಳು ಮಕ್ಕಳ ಕೈಗೆಟುಕುವಂತೆ ವ್ಯವಸ್ಥಿತವಾಗಿಡಲು ಅಲ್ಲಿನ ಅಧಿಕಾರಿಗಳಿಗೆ ಸೂಚಿಸಿದರು.

ಅಂಗನವಾಡಿಗೆ ಶೌಚಾಲಯ ಮತ್ತು ಕಂಪೌಂಡ್ ವ್ಯವಸ್ಥೆ ಕಲ್ಪಿಸಲು ಲಭ್ಯವಿರುವ ಯೋಜನೆ-ಅನುದಾನಲ್ಲಿ ಕಂಪೌಂಡ್, ಶೌಚಾಲಯ ಹಾಗೂ ಉದ್ಯಾನವನ ಹಾಗೂ ಹೊರಾಂಗಣ ಆಟದ ಮೈದಾನ ನಿರ್ಮಿಸಲು ಸ್ಥಳದಲ್ಲಿದ್ದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ತಿಕೋಟಾ ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಐನಾಪುರ, ಲೋಹಗಾಂವ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪದ್ಮಿನಿ ಬಿರಾದಾರ, ತಾಲೂಕು ನೋಡಲ್ ಅಧಿಕಾರಿ ಕಲ್ಯಾಣಶೆಟ್ಟಿ, ತಾಂತ್ರಿಕ ಸಹಾಯಕ ಅಭಿಯಂತರರಾದ ರೇಷ್ಮಾ ಬಾಗವಾನ, ಶ್ರೀಧರ ಸಾವಳಗಿ, ಅಂಗನವಾಡಿ ಕಾರ್ಯಕರ್ತೆ ಪ್ರಿಯಾಂಕಾ ರಾಠೋಡ ಸೇರಿದಂತೆ ಗ್ರಾಮ ಪಂಚಾಯತಿ,ಅಂಗನವಾಡಿ ಸಿಬ್ಬಂದಿ ಉಪಸ್ಥಿತರಿದ್ದರು.

## ಇಲ್ಲಿನ ಗಜಾನನ ಮಹಾಮಂಡಳಿಗೆ ಇಸ್ಲಾಂ ಧರ್ಮದ ಮಹಿಬೂಬ ಮಸಳಿ ಅಧ್ಯಕ್ಷರು!

# ಆಲಮೇಲದ ಗಣೇಶ ವಿಸರ್ಜನೆಗೆ ಕಲಾಕೃತಿಗಳ ಮೆರುಗು

- ಗುರು ಹಿರೇಮಠ
(ದೇವನಗಾಂವ)


ಆಲಮೇಲ: ಪಟ್ಟಣದ ವಿವಿಧ ಚೌಕಗಳ ಗಣೇಶ ಮೂರ್ತಿಗಳ ವಿಸರ್ಜನೆಗೆ ಸಿದ್ದತೆ ಭರ್ಜರಿಯಾಗಿ ನಡೆದಿದೆ. ಪುಣೆ ಮಾದರಿ, ಮೈಸೂರಿನ ದಸರಾ ಮಾದರಿಯಲ್ಲಿ ಭವ್ಯ ಮೆರವಣಿಗೆ, ಅಬ್ಬರದ ಡಿಜೆ ಸೌಂಡಗಳ ಸದ್ದು ಜೋರಾಗಲಿದೆ. ಕೋಲಾಟ ಝಾಂಜ್‌ಪತಾಕ ಹಲಗೆ ಮೇಳ, ಕೊಂಬು ವಾದನ ಹತ್ತಾರು ಜಾನಪದ ತಂಡಗಳು ಮೆರವಣಿಗೆಯಲ್ಲಿ ಮೆರಗು ನೀಡಲು ಅಣಿಯಾಗುತ್ತಿವೆ.

ಇಲ್ಲಿಯ ಗಣೇಶ ವಿಸರ್ಜನೆ ಪ್ರಸಿದ್ಧಿ ಪಡೆದಿದೆ. ಪಕ್ಕದ ರಾಜ್ಯಗಳಾದ ಮಹಾರಾಷ್ಟ್ರ ಮತ್ತು ಆಂಧ್ರಪ್ರದೇಶ, ರಾಜ್ಯದ ಕಲಬುರಗಿ ಬಾಗಲಕೋಟೆ ಯಾದಗಿರಿ ಸೇರಿದಂತೆ ಅನೇಕ ಜಿಲ್ಲೆಗಳಿಂದ ಮತ್ತು ಸುತ್ತ-ಮುತ್ತಲಿನ ತಾಲೂಕು ಹಾಗೂ ಗ್ರಾಮಗಳಿಂದ ಗಣೇಶೋತ್ಸವ ನೋಡಲು ಜನರು ಆಗಮಿಸುತ್ತಾರೆ. ಈಗಾಗಲೇ ಗಣೇಶ ವಿಸರ್ಜನೆಗೆ ಸಿದ್ದತೆಗಳು ನಡೆಯುತ್ತಿವೆ.ಇದೇ ಬುಧವಾರ 5ನೇ ದಿನದ ಗಣಪತಿ ವಿಸರ್ಜನೆ ನಡೆಯು ವುದರಿಂದ ಆಲಮೇಲದ ಅನೇಕ ಚೌಕ್ ದಿಂದ ಸ್ತಬ್ದ ಚಿತ್ರಗಳು ತಯಾರಿಯಾಗುತ್ತಿವೆ. ಸಂಜೆ ಹೊತ್ತಿಗೆ ಮೇರವಣಿಗೆ ಪ್ರಾರಂಭವಾಗಲಿದೆ. ಪಟ್ಟಣದ 15 ಗಣೇಶ ಮಂಡಳಿಗಳಿಗೆ ಒಂದು ಗಜಾನನ ಮಹಾ ಮಂಡಳ ರಚನೆಯಾಗುತ್ತದೆ. ಈ ಮಹಾಮಂಡಳಿಯ ಅಧ್ಯಕ್ಷರು ಇಸ್ಲಾಂ ಧರ್ಮದ ಮಹಿಬೂಬ ಮಸಳಿ ಆಗಿದ್ದಾರೆ. ಕಲಾಕೃತಿಗಳ ಮೆರಗು: ವಿಸರ್ಜನೆ ಮೆರವಣಿಗೆಯಲ್ಲಿ ಅನೇಕ ಕಲಾ ಕೃತಿಗಳು ಗಮನಸೆಳೆಯಲಿವೆ. ಗಣೇಶ ನಗರದ ಮಂಡಳಿಯಿಂದ ಆದಿಶಕ್ತಿ ಅವತಾರ, ಬಸವ ನಗರ ದಿಂದ ಸಪ್ತಸಂಗಿತ, ಮುಳಮಠ ಮಂಡಳದ ವತಿಯಿಂದ ಶಿವಾಜಿಯ ಕೋಟೆ, ಭವಾನಿ ಮಂಡಳದಿಂದ ದೇವಿ ಅವತಾರ, ರಾಘವೇಂದ್ರ ಮಂಡಳದಿಂದ ಬಾಲ ರಾಮನ ಅವತಾರ, ಹನುಮಾನ ಮಂಡಳದಿಂದ ರಾವಣ ಅವತಾರ, ದತ್ತ ಮಂಡಳದಿಂದ ತುಳಜಾಪೂರ ಅಂಬಾ ಭವಾನಿಯ ದ್ವಾರ ಬಾಗಿಲು, ಕಾಮನ ಕಟ್ಟಿ ಮಂಡಳದಿಂದ ಪಾಂಡುರಂಗ ವಿಠಲ, ಲಕ್ಷ್ಮೀ ಮಂಡಳದಿಂದ ಧ್ಯಾಮವ್ವನ ಜಾತ್ರೆ, ವೀರಭದ್ರೇಶ್ವರ ಮಂಡಳದಿಂದ ಬೆಲ್ಲದ ಭಾಗೇವಾಡಿಯ ದ್ಯಾಮ್ಮವ್ವನ ಜಾತ್ರೆ, ಗಾಂಧಿ ಮಂಡಳದಿಂದ ಶಿವಾಜಿ ನಿಂತಿರುವ ದೃಶ್ಯ, ಸಾವಳಗಿ ಶಿವಲಿಂಗೇಶ್ವರ ಚೌಕನಿಂದ ಶೀವ ನಂದಿ ಹೀಗೆ ಅನೇಕ ಬಗೆಯ ಸನ್ನಿವೇಶಗಳ ಕಲಾಕೃತಿಗಳು ರಾರಾಜಿಸಲಿವೆ.

ಆಲಮೇಲದ ಪ್ರಮುಖ ರಸ್ತೆಗಳಲ್ಲಿ ರಾತ್ರಿ ಇಡೀ ಪ್ರಸಾದದ ವ್ಯವಸ್ಥೆ ಕಲ್ಪಿಸಲಾಗಿದೆ.







ನಮ್ಮೂರಿನ ಗಣೇಶೋತ್ಸವದ ಸ್ಥಭ್ದ ಚಿತ್ರಗಳ ಮೇರವಣಿಗೆ ಅತಿ ವಿಜ್ರಂಭಣೆಯಿಂದ ನಡೆಯುವದು. ಮದುವಣಗಿತ್ತಿಯಂತೆ ಊರು ಸಿಂಗಾರಗೊಂಡು ನಿಂತಿದೆ."

» - ರಮೇಶ ಕಣ್ಣಿಮನಿ
ಗಣ್ಯ ವ್ಯಾಪಾರಸ್ತರು

"ನಮ್ಮೂರಿನ ಗಣೇಶನಹಬ್ಬ ಬಹಳ ವಿಜ್ರಂಭಣೆಯಿಂದ ಆಚರಣೆಯಾಗುತ್ತದೆ. ಈ ವೈಭವ ನೋಡಲು ವಿವಿಧ ಊರಿನಿಂದ ಜನ ಆಗಮಿಸುತ್ತಾರೆ. ಬಹಳ ವಿಶೇಷವಾಗಿ ಇರುತ್ತದೆ.

» - ಸಂಜೀವಕುಮಾರ ಬೊಗುಂಡಿ
ಯುವ ಮುಖಂಡರು

# ನೆರೆ ಹಾವಳಿ ಪ್ರದೇಶಕ್ಕೆ ಡಿ.ಸಿ ಭೇಟಿ,ಬೆಳೆ ಹಾನಿ ಪರಿಶೀಲನೆ



ಕಲಬುರಗಿ: ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ರವಿವಾರ ಸೇಡಂ ತಾಲೂಕಿನ ಮಳಖೇಡ್ ಗ್ರಾಮಕ್ಕೆ ಭೇಟಿ ನೀಡಿ ನೆರೆ ಹಾವಳಿಯಿಂದ ಹಾನಿಗೊಳಗಾದ ಬೆಳೆ ಹಾನಿ ಪರಿಶೀಲಿಸಿದರು.

ನೆರೆ ಹಾವಳಿಯಿಂದ ತತ್ತರಿಸಿದ ಪ್ರತಿಯೊಂದು ಹೊಲಕ್ಕೆ ಭೇಟಿ ನೀಡಿ ಬೆಳೆ ಹಾನಿ ಸಮೀಕ್ಷೆ ಕೈಗೊಂಡು ಕೂಡಲೆ ವರದಿ ನೀಡುವಂತೆ ಸ್ಥಳದಲ್ಲಿದ್ದ ತಹಶೀಲ್ದಾರ ಶ್ರೇಯಾಂಕಾ ಧನಶ್ರೀ ಅವರಿಗೆ ಸೂಚಿಸಿದರು.

ಇದಕ್ಕು ಮುನ್ನ ಜಿಲ್ಲಾಧಿಕಾರಿಗಳು ಕಾಗಿಣಾ ನದಿಗೆ ಅಡ್ಡಲಾಗಿ ನಿರ್ಮಿಸಿ ಇತ್ತೀಚೆಗೆ ಲೋಕಾರ್ಪಣೆಗೊಳಿಸಿದ ಮಳಖೇಡ್ ಸೇತುವೆ, ಮಳೆಯಿಂದ ಕುಸಿದ ಮಳಖೇಡ್ ಕೋಟೆ ವೀಕ್ಷಿಸಿದರು. ಮಳಖೇಡ್ ಗ್ರಾಮದಲ್ಲಿ ಮಳೆಯಿಂದ ಕುಸಿದ ಮನೆಯೊಂದಕ್ಕೂ ಭೇಟಿ ನೀಡಿ ಸಂತ್ರಸ್ತರ ಅಹವಾಲು ಆಲಿಸಿದ ಅವರು, ಸರ್ಕಾರದ ಮಾರ್ಗಸೂಚಿಯಂತೆ ಪರಿಹಾರ ನೀಡಲಾಗುವುದೆಂದರು.

ಸೇಡಂ ಸಹಾಯಕ ಆಯುಕ್ತ ಪ್ರಭುರೆಡ್ಡಿ, ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್, ತಾಲೂಕ ಪಂಚಾಯತ್ ಇ.ಓ ಚೆನ್ನಪ್ಪ ರಾಯಣ್ಣನವರ, ಸಹಾಯಕ ಕೃಷಿ ನಿರ್ದೇಶಕ ಹಂಪಣ್ಣ ಸೇರಿದಂತೆ ಅನೇಕ ಅಧಿಕಾರಿಗಳಿದ್ದರು.

# ಜಿಲ್ಲೆಯ ಜನತೆ ಭಾಗವಹಿಸುವಂತೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಮನವಿ

ಕಲಬುರಗಿ: ಇದೇ ಸೆಪ್ಟೆಂಬರ್ 15 ರಂದು ಪ್ರಜಾಪ್ರಭುತ್ವ ದಿನಾಚರಣೆ ಹಿನ್ನೆಲೆಯಲ್ಲಿ ಬೀದರದಿಂದ ಚಾಮರಾಜನಗರ ವರೆಗೂ ರಾಜ್ಯದಾದ್ಯಂತ ಏಕಕಾಲಕ್ಕೆ ದಾಖಲೆ ಪ್ರಮಾಣದಲ್ಲಿ ಮಾನವ ಸರಪಳಿ ರಚಿಸಲಾಗುತ್ತಿದ್ದು, ಜಿಲ್ಲೆಯ ಜನತೆ ಉತ್ಸಾಹದಿಂದ ಇದರಲ್ಲಿ ಭಾಗಿಯಾಗಬೇಕೆಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಮನವಿ ಮಾಡಿದ್ದಾರೆ.

ಕಲಬುರಗಿ ಜಿಲ್ಲೆಯಲ್ಲಿ ಏಕಕಾಲಕ್ಕೆ 113 ಕಿ.ಮೀ. ಉದ್ದ ಮಾನವ ಸರಪಳಿ ರಚಿಸಲಾಗುತ್ತಿದೆ. ಪ್ರತಿಯೊಂದು ಕಿ.ಮೀ. ಅಂತರದಲ್ಲಿ ಸುಮಾರು 800 ಜನ ಸೇರಲಿದ್ದಾರೆ. ಅಂದು ಬೆಳಿಗ್ಗೆ 8.45 ಗಂಟೆಗೆಣಟಿಜಜಜಿಟಿಜಜ ಎಲ್ಲವು ಸಜ್ಜುಗೊಂಡು ಸರಿಯಾಗಿ ಬೆಳಿಗ್ಗೆ 9 ಗಂಟೆಗೆ ಮಾನವ ಸರಪಳಿ ನಿರ್ಮಿಸುವ ಮೂಲಕ ಪ್ರಜಾಪ್ರಭುತ್ವ ಮಹತ್ವ ಸಾರಲಾಗುತ್ತದೆ. ತದನಂತರ 9.15 ಗಂಟೆಗೆ ಸಂವಿಧಾನ ಪೀಠಿಕೆ ವಾಚನ, 9.30 ಗಂಟೆಗೆ ಕೊನೆಯದಾಗಿ ಜಯ ಹಿಂದ್-ಜಯ್ ಕರ್ನಾಟಕ ಘೋಷಣೆಯೊಂದಿಗೆ ಕಾರ್ಯಕ್ರಮ ಮುಕ್ತಾಯವಾಗಲಿದೆ.

ಹೀಗಾಗಿ ಜಿಲ್ಲೆಯ ಎಲ್ಲಾ ಅಧಿಕಾರಿ-ನೌಕರ ಬಂಧಗಳು, ಶಾಲಾ-ಕಾಲೇಜು ವಿದ್ಯಾರ್ಥಿಗಳು, ಮಹಿಳಾ ಸ್ವ-ಸಂಘದ ಸದಸ್ಯರು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ಸಿಗೆ ಸಹಕರಿಸಬೇಕೆಂದು ಕೋರಿದ್ದಾರೆ.

ಜಿಲ್ಲೆಯ ಕಮಲಾಪೂರ ತಾಲೂಕಿನ ಕಿಣ್ಣಿಸಡನಿಂದ ಕಮಲಾಪೂರ-ಕಲಬುರಗಿ-ಶಹಾಬಾದ-ರಾವೂರ-ವಾಡಿ(ಬಲರಾಮ್ ಚೌಕ್)-ನಾಲವಾರ ಮಾರ್ಗವಾಗಿ ಅಲ್ಲಿಪೂರ ತಾಂಡಾ ವರೆಗೆ ಮಾನವ ಸರಪಳಿ ನಿರ್ಮಿಸಲಾಗುತ್ತಿದೆ.

# ಛಲವಾದಿ ನಾರಾಯಣಸ್ವಾಮಿ ಬಗ್ಗೆ ಅವಹೇಳನಕಾರಿ ಹೇಳಿಕೆ ಖಂಡಿಸಿ ಬೃಹತ್ ಪ್ರತಿಭಟನೆ



ಕಲಬುರಗಿ: ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರು ಹಾಗೂ ಹಿರಿಯ ಬಿಜೆಪಿ ಮುಖಂಡರಾಗಿರುವ ಛಲವಾದಿ ನಾರಾಯಣಸ್ವಾಮಿ ಅವರ ಕುರಿತು ಹಗುರವಾಗಿ ಹಾಗೂ ಅವಹೇಳನಕಾರಿಯಾಗಿ ಮಾತನಾಡಿರುವ ರಾಜ್ಯ ಸಚಿವರಾಗಿರುವ ಎಂ ಬಿ ಪಾಟೀಲ್ ಅವರನ್ನು ಸಚಿವ ಸಂಪುಟದಿಂದ ಕೈಬಿಡಬೇಕು.

ಒಬ್ಬ ದಲಿತ ನಾಯಕನ ವಿರುದ್ಧ ಅವಹೇಳನಕಾರಿಯಾಗಿ ಮಾತನಾಡಿರುವ ಎಂ ಬಿ ಪಾಟೀಲರ ಮೇಲೆ ದಲಿತ ದೌರ್ಜನ್ಯ ಪ್ರಕರಣದಡಿಯಲ್ಲಿ ಕೇಸ್ ದಾಖಲಿಸಲು ಆಗ್ರಹಿಸಿ ಕಲ್ಬುರ್ಗಿಯ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಗುವುದು.

ದಿನಾಂಕ 10 -09-2024 ರಂದು ಬೆಳಗ್ಗೆ 10 ಗಂಟೆ 30 ನಿಮಿಷಕ್ಕೆ ಸರ್ದಾರ್ ವಲ್ಲಭಭಾಯ್ ಪಟೇಲ್ ವೃತದಿಂದ ಜಿಲ್ಲಾಧಿಕಾರಿಗಳ ಕಚೇರಿ ಅವರಿಗೆ ಜಿಲ್ಲೆಯ ಬಿಜೆಪಿ ಶಾಸಕರು ವಿಧಾನ ಪರಿಷತ್ ಸದಸ್ಯರು ಬಿಜೆಪಿ ಮಹಾನಗರ ಜಿಲ್ಲಾಧ್ಯಕ್ಷರು ಹಾಗೂ ಗ್ರಾಮಾಂತರ ಬಿಜೆಪಿ ಜಿಲ್ಲಾಧ್ಯಕ್ಷರು ಮಾಜಿ ಶಾಸಕರು , ಸ್ಥಳೀಯ ಜನಪ್ರತಿನಿಧಿಗಳು ಮಾಜಿ ಜನಪ್ರತಿನಿಧಿಗಳು, ಬಿಜೆಪಿ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಪಕ್ಷದ ಪ್ರಮುಖರು ಹಾಗೂ ಕಾರ್ಯಕರ್ತರು ಈ ಪ್ರತಿಭಟನೆಯಲ್ಲಿ ಭಾಗ 'ವಹಿಸಲಿದ್ದಾರೆ.

ದಲಿತ ಪರ ಕಾಳಜಿಯುಳ್ಳ ಎಲ್ಲರೂ ಈ ಪ್ರತಿಭಟನೆಯಲ್ಲಿ ಭಾಗವಹಿಸಲು ಬಿಜೆಪಿ ಎಸ್ಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷರಾದ ಡಾ ಅಂಬಾರಾಯ ಅಷ್ಠಗಿ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಬಸವರಾಜ್ ಬೆಣ್ಣೂರ, ಬಿಜೆಪಿಯ ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಮರೆಪ್ಪ ಬಡಿಗೇರ್, ಬಿಜೆಪಿ ಎಸ್ಸಿ ಮೋರ್ಚಾ ಮಹಾನಗರ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ತಾರಫೈಲ, ಧರ್ಮಣ್ಣ ಇಟಗಾ, ಎಸ್ ಜಿ ಭಾರತಿ , ಬಿಜೆಪಿ ಮಹಾನಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ವಾಡೇಕರ್, ಮಾಜಿ ಮೇಯರ್ ವಿಶಾಲ್ ದರ್ಗಿ ಮಾಜಿ ಮಹಾನಗರ ಪಾಲಿಕೆ ಸದಸ್ಯರಾದ ಗಣೇಶ್ ವಳಕೇರಿ, ಬಿಜೆಪಿ ಮಹಾನಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಯೋಗಿ ನಾಗನಹಳ್ಳಿ, ಪ್ರಮುಖರಾದ ಅಂಬಾರಾಯ ಬೆಳಕೋಟಾ, ಸಂತೋಷ ಹಾದಿಮನಿ,ಅಂಬಾರಾಯ ಚಲಗೇರಾ,ಸೇರಿದಂತೆ ಬಿಜೆಪಿ ಪ್ರಮುಖರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೇಡಕಪಳ್ಳಿ ಡೊಳ್ಳು, ಭಜನೆಗಳ ಮಧ್ಯೆ ಸಂಭ್ರಮದಿಂದ ಜರುಗಿದ ಪಲ್ಲಕೋತ್ಸವ



ಚಿಂಚೋಳಿ, : ತಾಲ್ಲೂಕಿನ ಸುಲೇಪೇಟ ಹೋಬಳಿ ವ್ಯಾಪ್ತಿಯಲ್ಲಿ ಬರುವ ಬೇಡಕಪಳ್ಳಿ ಗ್ರಾಮದಲ್ಲಿ ಶ್ರಾವಣ ಮಾಸದ ಪ್ರಯುಕ್ತ ಹನುಮ ದೇವರ ಪಲ್ಲಕ್ಕಿ ಉತ್ಸವ ನಡೆಯಿತು. ಉತ್ಸವದ ಕಾರಣದಿಂದಾಗಿ ಗ್ರಾಮವನ್ನು ಸಿಂಗಾರಗೊಳಿಸಿದ್ದು,

ಪಲ್ಲಕ್ಕಿ ಮೆರವಣಿಗೆಯ ಹಿಂದಿನ ದಿನ ಭಕ್ತರಿಗೆ ಮಹಾಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು. ಹನುಮಾನ ದೇವರಿಗೆ ವಿಶೇಷವಾದ ಬಗೆ ಬಗೆಯ ಪೂಜೆ ವಿಧಿ ವಿಧಾನಗಳು ಮತ್ತು ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಹನುಮಾನ ದೇವರ ಪಲ್ಲಕ್ಕಿ ಮೆರವಣಿಗೆಯು ಗ್ರಾಮದ ಹನುಮಾನ ದೇವಸ್ಥಾನದಿಂದ ಪ್ರಾರಂಭವಾಗಿ ಗ್ರಾಮದ ಪ್ರಮುಖ ಬೀದಿಗಳಿಗೆ ಸಂಚರಿಸಿತು. ಜ್ಯೋತಿಯನ್ನು ಹಚ್ಚಿದ ಕಲಶವನ್ನು ಹಿಡಿದುಕೊಂಡು ಯುವತಿಯರು ಪಲ್ಲಕ್ಕಿಯ ಜೊತೆಗೆ ಮೆರವಣಿಗೆಯಲ್ಲಿ ಸಾಗಿದರು. ಒಂದೆಡೆ ಮೆರವಣಿಗೆಯ ಜೊತೆ ಜೊತೆಗೆ ಹಳ್ಳಿ ಸೊಗಡಿನ ಕಲೆಗಳಾದ ಡೊಳ್ಳು ಕುಣಿತ ಭಜನೆ ಹಾಡುಗಳು ಜನರನ್ನು ಆಕರ್ಷಿಸುವಂತಿದ್ದರೆ,

ಇನ್ನೊಂದೆಡೆ ಯುವಕರು ಮಕ್ಕಳು ಆಧುನಿಕ ಗೀತೆಗಳಿಗೆ ಕುಣಿದು ಕುಪ್ಪಳಿಸಿದರು. ಒಟ್ಟಾರೆ ಇಂದು ಮರೆಯಾಗುತ್ತಿರುವ ಜಾನಪದ ಕಲೆಗಳನ್ನು ನೆನಪಿಸುವಂತೆ ಅದ್ದೂರಿಯಾಗಿ ಉತ್ಸವ ನಡೆಯಿತು.ಈ ಸಂದರ್ಭದಲ್ಲಿ ಪ್ರೊ.ಮಲ್ಲಿಕಾರ್ಜುನ ಪಾಲಾಮೂರ್, ಮಹಾದೇವಪ್ಪ ಪೊಲೀಸ್ ಪಾಟೀಲ್, ರಾಜು ಉಪ್ಪಿನ್, ಚಂದ್ರಶೇಖರ ರೆಡ್ಡಿ ಮಾಲಿ ಪಾಟೀಲ್ ಸೇರಿದಂತೆ ಸಮಸ್ತ ಗ್ರಾಮದ ಹಿರಿಯರು,ಮುಖಂಡರು, ಮಹಿಳೆಯರು ಮಕ್ಕಳು ಯುವಕರು ಸೇರಿದಂತೆ ಗ್ರಾಮಸ್ಥರು ಪಾಲ್ಗೊಂಡು ಯಶಸ್ವಿಗೊಳಿಸಿದರು.

# ಜಿಲ್ಲಾ ಕಸಾಪದಿಂದ ಅಕ್ಟೋಬರ್ ತಿಂಗಳಿನಲ್ಲಿ ಆಯೋಜನೆ: ತೇಗಲತಿಪ್ಪಿ



ಕಲಬುರಗಿ: ಈ ನೆಲದ ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸಿಕೊಂಡು ಹೋಗುವ ನಿಟ್ಟಿನಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ರಾಜ್ಯದಲ್ಲಿಯೇ ಪ್ರಪ್ರಥಮ ಬಾರಿಗೆ ಬರುವ ಅಕ್ಟೋಬರ್ ತಿಂಗಳಿನಲ್ಲಿ ನಗರದಲ್ಲಿ ಒಂದು ದಿನದ ಕಲಬುರಗಿ ಜಿಲ್ಲಾ ಪ್ರಥಮ ಸೂಫಿ ಸಾಹಿತ್ಯ ಸಮ್ಮೇಳನವನ್ನು ಏರ್ಪಡಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾ ಕಸಾಪ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ತಿಳಿಸಿದ್ದಾರೆ.

ನಮ್ಮ ಕಲ್ಯಾಣ ನಾಡು ಕರ್ನಾಟಕದ ಹೆಬ್ಬಾಗಿಲಿದ್ದಂತೆ. ಕಲಬುರಗಿ ಜಿಲ್ಲೆ ಭಾರತದಲ್ಲೇ ಭಾವೈಕ್ಯ ಬಿಂಬಿಸುವ ಪ್ರಮುಖ ತಾಣವಾಗಿದೆ. 12ನೇ ಶತಮಾನದ ಬಸವಾದಿ ಶರಣರ ಕಾಯಕ-ದಾಸೋಹ ಸೂತ್ರ ಪಾಲಿಸಿದ ಶರಣಬಸವೇಶ್ವರರು, ಶ್ರೇಷ್ಠ ಸೂಫಿ ಸಂತ ಖ್ವಾಜಾ ಬಂದೇ ನವಾರು ನಡೆದು ನುಡಿದ ಸಮನ್ವಯತೆಯ ಪವಿತ್ರ ನೆಲವಿದು. ಹೀಗಾಗಿ ಈ ನೆಲ ಐತಿಹಾಸಿಕ, ಸಾಂಸ್ಕೃತಿಕ ಮತ್ತು ಭೌಗೋಳಿಕ ದೃಷ್ಟಿಯಿಂದಲೂ ತುಂಬಾ ಪ್ರಮುಖವಾದ ನೆಲವಾಗಿದ್ದು, ಸೂಫಿ ಸಾಹಿತ್ಯ ಕರ್ನಾಟಕದ ಸೂಫಿ ಪರಂಪರೆಗೆ ಜಿಲ್ಲೆಯ ಕೊಡುಗೆ ಅಮೋಘವಾಗಿದೆ. ಈ ನಿಟ್ಟಿನಲ್ಲಿ ಶ್ರೇಷ್ಠ ಪರಂಪರೆಯನ್ನು ಇಂದಿನ ಹೊಸ ಪೀಳಿಗೆಗೆ ತಿಳಿಸಿಕೊಡುವ ಉದ್ದೇಶ ಈ ಸಮ್ಮೇಳನದ್ದಾಗಿದೆ ಎಂದು ಹೇಳಿದರು.

ಈಗಾಗಲೇ ವಿನೂತನ ಮತ್ತು ವಿಶೇಷ ರೀತಿಯ ಸಾಹಿತ್ಯ ಸಮ್ಮೇಳನಗಳು ಪರಿಷತ್ತಿನ ವತಿಯಿಂದ ಜರುಗಿವೆ. ಕಳೆದ ಎರಡೂವರೆ ವರ್ಷಗಳಲ್ಲಿ ಶಿಕ್ಷಕ ಸಾಹಿತ್ಯ, ಪತ್ರಕರ್ತ ಸಾಹಿತಿಗಳ, ವಚನ ಸಾಹಿತ್ಯ, ದಾಸ ಸಾಹಿತ್ಯ, ತತ್ವಪದ ಸಾಹಿತ್ಯ ಹಾಗೂ ದಲಿತ ಚಳವಳಿ ಸಾಹಿತ್ಯ ಸಮ್ಮೇಳನಗಳನ್ನು ಯಶಸ್ವಿಯಾಗಿ ನಡೆಸಲಾಗಿದೆ. ಇದೀಗ ಮತ್ತೆ ಇನ್ನೊಂದು ವಿಶೇಷಾದ ಸೂಫಿ ಸಾಹಿತ್ಯ ಸಮ್ಮೇಳನವನ್ನು ಹಮ್ಮಿಕೊಳ್ಳಲು ಕನ್ನಡ ಭವನದಲ್ಲಿ ನಡೆದ ಸಭೆಯಲ್ಲಿ ಒಮ್ಮತಾಭಿಪ್ರಾಯದ ಮೇರೆಗೆ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದರು.

ಕನ್ನಡ ನಾಡು-ನುಡಿ ಶ್ರೀಮಂತಗೊಳಿಸುವಲ್ಲಿ ಹಾಗೂ ಭಾವೈಕ್ಯತೆ ಮೂಡಿಸುವಲ್ಲಿ ಸೂಫಿ ಸಾಹಿತ್ಯ ಪ್ರಮುಖ ಪಾತ್ರ ವಹಿಸಿದೆ. ಇಂಥ ಸೂಫಿ ಸಾಹಿತ್ಯ ಸಮ್ಮೇಳನ ರಾಜ್ಯದಲ್ಲಿಯೇ ಪ್ರಪ್ರಥಮ ಬಾರಿಗೆ ಕಲಬುರಗಿ ನೆಲದಲ್ಲಿ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಒಂದು ದಿನದ ಕಲಬುರಗಿ ಜಿಲ್ಲಾ ಸೂಫಿ ಸಾಹಿತ್ಯ ಸಮ್ಮೇಳನ ಏರ್ಪಡಿಸಲಾಗುತ್ತದೆ. ಸಮ್ಮೇಳನ ನಿಮಿತ್ತ ಸ್ವಾಗತ ಸಮಿತಿ ರಚಿಸಿ ಅಧಿಕೃತ ಚಾಲನೆ ನೀಡಲಾಗುವುದು. ಈ ಕುರಿತು ಬರುವ ದಿನಗಳಲ್ಲಿ ಸಮ್ಮೇಳನದ ಸರ್ವಾಧ್ಯಕ್ಷರ ಆಯ್ಕೆ ಹಾಗೂ ಅದರ ರೂಪುರೇಷೆಗಳ ಬಗ್ಗೆ ಪರಿಷತ್ತಿನ ಕಾರ್ಯಕಾರಿಣಿ ಸಭೆಯಲ್ಲಿ ಸೂಕ್ತ ನಿರ್ಣಯ ಕೈಗೊಳ್ಳಲಾಗುವುದು ಎಂದು ವಿವರಿಸಿದರು.

ಸಭೆಯಲ್ಲಿ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಶಿವರಾಜ ಅಂಡಗಿ, ಧರ್ಮಣ್ಣ ಎಚ್ ಧನ್ನಿ, ಕೋಶಾಧ್ಯಕ್ಷ ಶರಣರಾಜ ಛಪ್ಪರಬಂದಿ, ಪ್ರಮುಖರಾದ ರವೀಂದ್ರಕುಮಾರ ಭಂಟನಳ್ಳಿ, ಡಾ. ರೆಹಮಾನ್ ಪಟೇಲ್, ಕಲ್ಯಾಣಕುಮಾರ ಶೀಲವಂತ, ಶಕುಂತಲಾ ಪಾಟೀಲ ಜಾವಳಿ, ರಾಜೇಂದ್ರ ಮಾಡಬೂಳ, ಧರ್ಮರಾಜ ಜವಳಿ, ರಮೇಶ ಡಿ ಬಡಿಗೇರ, ಸಿದ್ಧಲಿಂಗ ಬಾಳಿ, ಬಾಬುರಾವ ಪಾಟೀಲ, ಸೋಮಶೇಖರ ನಂದಿಧ್ವಜ, ಶಿವಾನಂದ ಪೂಜಾರಿ, ಸೋಮಶೇಖರಯ್ಯಾ ಹೊಸಮಠ, ಜೆ.ಎಸ್. ವಿನೋದಕುಮಾರ, ಸುರೇಶ ದೇಶಪಾಂಡೆ, ಸಂತೋಷ ಕುಡಳ್ಳಿ, ದಿನೇಶ ಮದಕರಿ, ಹಣಮಂತಪ್ರಭು, ಎಂ ಎನ್ ಸುಗಂಧಿ, ಪ್ರಭುಲಿಂಗ ಮೂಲಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಜೀವನದಲ್ಲಿ ಒಳ್ಳೆ ಕಾರ್ಯ ಮಾಡುವುದು ಬಹಳ ಅವಶ್ಯ



ಕಲಬುರಗಿ,: "ಮನುಷ್ಯನಾಗಿ ಹುಟ್ಟಿದ ಮೇಲೆ ಜೀವನದಲ್ಲಿ ಒಳ್ಳೆಯ ಕೆಲಸ ಮಾಡೋದು ಬಹಳ ಅವಶ್ಯವಾಗಿದೆ. ಅದರ ಜೊತೆಯಲ್ಲಿ ಸತ್ಸಂಗ ಕಾರ್ಯವನ್ನು ಮಾಡುತ್ತಾ ಹೋದರೆ ಜೀವನದಲ್ಲಿ ನೆಮ್ಮದಿ ಕಾಣಲು ಸಾಧ್ಯ ಎಂದು ಕಡಗಂಚಿಯ ವೀರಭದ್ರ ಶಿವಾಚಾರ್ಯರು ಹೇಳಿದರು.

ನಗರದ ಗಂಜ್ ಬ್ಯಾಂಕ್ ಕಾಲೋನಿಯ ಬಸವೇಶ್ವರ ದೇವಸ್ಥಾನ ಆವರಣದಲ್ಲಿ ಹಮ್ಮಿಕೊಂಡಿದ್ದ ಸಿದ್ಧಾಂತ ಶಿಖಾಮಣಿ ಜ್ಞಾನಜ್ಯೋತಿ ಕಾರ್ಯಕ್ರಮ ಮಂಗಲ ಸಮಾರೋಪ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಜೀವನದಲ್ಲಿ ಎಷ್ಟೇ ಕಷ್ಟ ಬಂದರೂ ಪುಣ್ಯ ಕಾರ್ಯಗಳನ್ನು ಮಾಡಬೇಕು ಆದ್ದರಿಂದ ಮನುಷ್ಯ ಒಳ್ಳೆಯ ಮಾರ್ಗ ಹಿಡಿಯಲು ಸಾಧ್ಯವೆಂದು ಹೇಳಿದರು. ಶರಣಬಸವೇಶ್ವರ ಸಂಸ್ಥಾನದ ಡಾ.ಲಿಂಗರಾಜ ಅಪ್ಪ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ, ಸಿದ್ಧಾಂತ ಶಿಖಾಮಣಿ ಜ್ಞಾನಜ್ಯೋತಿ ಪ್ರವಚನ ಸಂಸ್ಥೆಗೆ ಕಡಗಂಚಿ ಪೂಜ್ಯರ ಸಂಪೂರ್ಣ ಸಹಾಯ ಸಹಕಾರ ಇರುವುದರಿಂದ ಸುಧೀರ್ಘವಾಗಿ ಸುಮಾರು 18 ವರ್ಷ ನಡೆದು ಬಂದದ್ದು ನನಗೆ ಬಹಳ ಸಂತೋಷದ ವಿಷಯ ಈ ಸಂಸ್ಥೆಗೆ ನನ್ನ ಕಡೆಯಿಂದ ಎಷ್ಟು ಸಾಧ್ಯವೋ ಅಷ್ಟು ಸಹಾಯ ಸಹಕಾರ ಮಾಡಲು ಸಿದ್ಧ ಎಂದು ಹೇಳಿದರು. ಈ ಸಂಸ್ಥೆ ಉತ್ತಮ ಮಟ್ಟದಲ್ಲಿ ಬೆಳೆಯಲೆಂದು ಅವರು ಹಾರೈಸಿದರು. ಕಾರ್ಯಕ್ರಮದ ಅಂಗವಾಗಿ ಡಾ.ಲಿಂಗರಾಜ ಅಪ್ಪ ಅವರನ್ನು ಸನ್ಮಾನಿಸಲಾಯಿತು

ಸಿದ್ದಾನಂದ ಶಿವಯೋಗಿಗಳಿಂದ ಉಪನ್ಯಾಸ ಕಾರ್ಯಕ್ರಮ ಜರುಗಿತು. ಜೈ ಗುರುದೇವ ಶಿವಪುತ್ರಪ್ಪ ಡಿಗ್ಗಿ, ಶಿವರಾಯ ಮುಲಗೆ, ಶಿವಾನಂದ ಕಶೆಟ್ಟಿ, ಶಿವಾನಂದ ಮಾನಕರ, ವರದಾ ಶಂಕರ್ ಶೆಟ್ಟಿ, ಸಿದ್ದಮ್ಮ ಅಕ್ಕನವರು, ವಿಶ್ವನಾಥ ವಾಗಣಗೇರಿ, ಶಿವಾನಂದ ಮಠಪತಿ, ಬಸಯ್ಯ ಸ್ವಾಮಿ ಕೊಡದೂರ, ಜಗದೇವಪ್ಪ ಕಲ್ಬುರ್ಗಿ, ಮಾದೇವಪ್ಪ ಅಲಗೂಡಕರ್, ಚನ್ನಮಲ್ಲಯ್ಯ ಸ್ವಾಮಿ, ಕೇದಾರನಾಥ ಮಲ್ಕಪ್ಪಗೋಳ, ಅಂಬಾರಾಯ ಕೋಣೆ, ದತ್ತು ಜಾನಕರ್, ಮಹಾಲಿಂಗಯ್ಯ ಸ್ವಾಮಿ ಉಪಸ್ಥಿತರಿದ್ದರು. ರವಿಶಾಸ್ತ್ರಿ ಅವರಿಂದ ವೇದಘೋಷ, ಜಗದೀಶ್ ಪಸಾರ್, ಮಲ್ಲಿಕಾರ್ಜುನ ಮುಖರಂಬಿ ಅವರಿಂದ ಸಂಗೀತ ಸೇವೆ, ಶಿವರುದ್ರಯ್ಯ ಸ್ವಾಮಿ ಚಂದನಕೇರಾ ಕಾರ್ಯಕ್ರಮವನ್ನು ನಿರೂಪಿಸಿದರು ಈ ಸಮಾರೋಪ ಕಾರ್ಯಕ್ರಮದಲ್ಲಿ ಸಿದ್ಧಾಂತ ಶಿಖಾಮಣಿ ಪ್ರವಚನ ವೇದಿಕೆ ಕೇಂದ್ರ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಪದಾಧಿಕಾರಿಗಳು ಹಾಗೂ ಬಸವೇಶ್ವರ ದೇವಸ್ಥಾನದ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಪದಾಧಿಕಾರಿಗಳು ಸಮಸ್ತ ಗಂಜ್ ಬ್ಯಾಂಕ್ ಕಾಲೋನಿಯ ಸದ್ಭಕ್ತರು ಉಪಸ್ಥಿತರಿದ್ದರು.

# ರಾಷ್ಟ್ರದ ಅಭಿವೃದ್ಧಿಗೆ ಶಿಕ್ಷಣವೇ ಚಾಲನಾ ಶಕ್ತಿ




ಕಲಬುರಗಿ: ಶಿಕ್ಷಣವು ವ್ಯಕ್ತಿಗೆ ಕೇವಲ ಪ್ರಮಾಣ ಪತ್ರ ಮಾತ್ರ ನೀಡದೆ, ಜ್ಞಾನ, ಬುದ್ಧಿ, ಕೌಶಲಗಳನ್ನು ನೀಡುತ್ತದೆ. ಇದರಿಂದ ವ್ಯಕ್ತಿಯು ಶಕ್ತಿಯಾಗಿ ಹೊರಹೊಮ್ಮುವ ಮೂಲಕ ರಾಷ್ಟ್ರದ ಪರಿವರ್ತನೆಗೆ ಕಾರಣವಾಗುತ್ತಾನೆ. ತನ್ಮೂಲಕ ಶಿಕ್ಷಣವು ರಾಷ್ಟ್ರದ ಅಭಿವೃದ್ಧಿಗೆ ಚಾಲನಾ ಶಕ್ತಿಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ಪಿಡಿಎ ಇಂಜಿನೀಯರಿಂಗ ಕಾಲೇಜಿನ ಪ್ರಾಧ್ಯಾಪಕ ಡಾ.ಬಾಬುರಾವ ಶೇರಿಕಾರ ಅಭಿಮತ ವ್ಯಕ್ತಪಡಿಸಿದರು.

ನಗರದ ಸಮೀಪದ ಕಪನೂರನಲ್ಲಿ ಎಎಫ್ ಸಂಸ್ಥೆಯ ಮತ್ತು 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಭಾನುವಾರ ಜರುಗಿದ 'ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ'ಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಬಳಗದ ಅಧ್ಯಕ್ಷ ಹಾಗೂ ಅರ್ಥಶಾಸ್ತ್ರ ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡಿ, ಶಿಕ್ಷಣವು ಮಾನವ ಅಭಿವೃದ್ಧಿಯ ಒಂದು ಪ್ರಮುಖ ಅಂಗ. ಮಾನವ ಅಭಿವೃದ್ಧಿಗೂ, ಆರ್ಥಿಕಾಭಿವೃದ್ಧಿಗೂ ಅತ್ಯಂತ ನಿಕಟವಾದ ಸಂಬಂಧವಿದೆ. ಆದ್ದರಿಂದಲೇ ಇಂದು ಭಾರತ, ಶಿಕ್ಷಣ ಅಭಿವೃದ್ಧಿಗೆ ಅನೇಕ ವಿಧಾನಗಳಲ್ಲಿ ಪ್ರಯತ್ನಿಸುತ್ತಿದೆ. ಶಿಕ್ಷಣವು ಸಾಮಾಜಿಕ ಪರಿವರ್ತನೆಯ ಒಂದು ಪ್ರಮುಖ ಸಾಧನವಾಗಿದೆ. ವರ್ತನೆಯಲ್ಲಿ ಸಕಾರಾತ್ಮಕವಾದ ಬದಲಾವಣೆ ಶಿಕ್ಷಣದಿಂದಲೇ ಸಾಧ್ಯವಿದೆ. ಪ್ರತಿಯೊಬ್ಬರು ಶಿಕ್ಷಣ ಪಡೆಯುವ ಮೂಲಕ ಪ್ರತಿಶತ ಸಾಕ್ಷರತೆ ಸಾಧಿಸುವುದು ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಎಬಿಐ ತಾಲೂಕಾ ಆರ್ಥಿಕ ಸಾಕ್ಷರತಾ ಸಮಾಲೋಚಕ ಗೋಪಾ ಜೆ.ಕುಲಕರ್ಣಿ ಅವರು ಸರ್ಕಾರದ ವಿವಿಧ ಯೋಜನೆಗಳ ಬಗ್ಗೆ ವಿವರಿಸಿದರು. ಬಳಗದ ಕಾರ್ಯದರ್ಶಿ ರಾಜಶೇಖರ ಬಿ.ಮರಡಿ, ಎಎಫ್ ಡಿಜಿಟಲ್ ಸಖಿ ಯೋಜನೆಯ ಕ್ಲಸ್ಟರ್ ಸಂಯೋಜಕಿ ವಿಜಯಲಕ್ಷ್ಮೀ, ಪ್ರಮುಖರಾದ ರೇಣುಕಾ ಸಿ.ಮಠಪತಿ, ಮೆಹಬೂಬಿ, ಲಕ್ಷ್ಮೀ ಶಾಬಾದ, ಕಲ್ಲಮ್ಮ ಪೂಜಾರಿ, ಭಾಗ್ಯಶ್ರೀ ಹಡಗಿಲ್ ಹಾರತಿ, ಸುಜಾರಾ ಆರ್.ಕಪನೂರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಕಲ್ಯಾಣದ ರಚನಾತ್ಮಕ ಪ್ರಗತಿ: ಸಮಾಲೋಚನಾ ಸಭೆ



ಕಲಬುರಗಿ, : ಕಲ್ಯಾಣ ಕರ್ನಾಟಕ ಪ್ರದೇಶದ ರಚನಾತ್ಮಕ ಪ್ರಗತಿ ಮತ್ತು 371ನೇ(ಜೆ) ಕಲಂಪರಿಣಾಮಕಾರಿ ಅನುಷ್ಠಾನ ಸೇರಿದಂತೆ ಕಲ್ಯಾಣ ಕರ್ನಾಟಕದ ಅಭಿವೃದ್ಧಿಪರ ಸುಮಾರು 16 ಅಂಶಗಳ ವಿಷಯಗಳ ಕುರಿತು ಮುಖ್ಯಮಂತ್ರಿಗಳ ರಾಜಕೀಯ ಸಲಹೆಗಾರರಾದ ಬಿ.ಆರ್ ಪಾಟೀಲ ಅವರೊಂದಿಗೆ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ವತಿಯಿಂದ ಕಲ್ಯಾಣದ ಪರಿಣಿತ ತಜ್ಞರ, ಚಿಂತಕರ ಹಾಗೂ ಪ್ರಮುಖರ ಸಮಲೋಚನಾ ಸಭೆ ಐವಾನ್-ಇ-ಶಾಹಿ ಅತಿಥಿ ಗೃಹದಲ್ಲಿ ನಡೆಯಿತು. ಸಭೆಯಲ್ಲಿ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಲಕ್ಷ್ಮಣ ದಸ್ತಿ ಅವರು ಕಲಬುರಗಿಯಲ್ಲಿ ಒಂದು ದಶಕದ ನಂತರ ಸರಕಾರ 371ನೇ(ಜೆ) ಕಲಂ ದಶಮಾನೋತ್ಸವದ ಸಂದರ್ಭದಲ್ಲಿ ಸಂಪುಟ ಸಭೆ ನಡೆಸುತ್ತಿರುವುದಕ್ಕೆ ಸ್ವಾಗತಿಸಿ ಕಲ್ಯಾಣ ಕರ್ನಾಟಕದ 371ನೇ(ಜೆ) ಕಲಂಪರಿಣಾಮಕಾರಿ ಅನುಷ್ಠಾನ ಸೇರಿದಂತೆ, ಕಲ್ಯಾಣದ ನೀರಾವರಿ, ಕೈಗಾರಿಕೆ, ರಸ್ತೆ, ಸಾರಿಗೆ, ಶಿಕ್ಷಣರೈಲ್ವೆ, ಪ್ರವಾಸೋದ್ಯಮ ಸೇರಿದಂತೆ ಎಲ್ಲಾ ಕ್ಷೇತ್ರಗಳ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಮಂಡಿಸಿದರು. ಅದಕ್ಕೆ ಪೂರಕವಾಗಿ ಪ್ರೊ.ಆರ್.ಕೆ. ಹುಡಗಿ, ಪ್ರೊ. ಬಸವರಾಜಕುಮನೂರ, ಡಾ. ಸುರೇಶಕುಮಾರ, ರೌಫ್ ಖಾದ್ರಿ, ಪ್ರೊ. ಗುರುಬಸಪ್ಪ, ಡಾ. ಮಾಜಿದ್ ದಾಗಿ, ಪ್ರೊ. ಮಂಜೂರ ಡೆಕ್ಕನಿ

ವಿಷಯಗಳ ಬಗ್ಗೆ ವಿಶ್ಲೇಷಣೆ ಮಾಡಿ ಮನವರಿಕೆ ಮಾಡಿದರು. ಕಲ್ಯಾಣ ಕರ್ನಾಟಕದ ಸಮಸ್ಯೆಗಳ ಬಗ್ಗೆ ಅಲಿಸಿದ ಶಾಸಕ ಬಿ.ಆರ್.

ಪಾಟೀಲ ಅವರು ಕಲಬುರಗಿಯಲ್ಲಿ ನಡೆಯುವ ಕ್ಯಾಬಿನೆಟ್

ಸಭೆಯಲ್ಲಿ ಮಹತ್ವದ ನಿರ್ಣಯಗಳನ್ನು ತೆಗೆದುಕೊಳ್ಳಲು ತಾವು ಗಂಭೀರವಾಗಿ ಪರಿಗಣಿಸುವುದಾಗಿ ವಿವರಿಸುತ್ತಾ ಭರವಸೆ ನೀಡಿದರು. ಅದರಂತೆ ಕಲ್ಯಾಣದ ರಚನಾತ್ಮಕ ಪ್ರಗತಿಗೆ ಸೈದ್ಧಾಂತಿಕ ತಳಹದಿಯಮೇಲೆ ಹೋರಾಟಗಳು, ಚಿಂತನೆಗಳು, ವಿಚಾರ ಸಂಕಿರಣಗಳು, ಕಾರ್ಯಾಗಾರಗಳು ನಿರಂತರವಾಗಿ

ನಡೆಯಬೇಕೆಂದು ಈ ಸಭೆಯ ಮುಖಾಂತರ ಏಳು ಜಿಲ್ಲೆಯ ಅಭಿವೃದ್ಧಿಪರ ಬುದ್ಧಿ ಜೀವಿಗಳಿಗೆ,ಪ್ರಗತಿಪರರಿಗೆ, ವಿಶೇಷ ಕರೆ ನೀಡಿದರು.


ಸಭೆಯ ಅಧ್ಯಕ್ಷತೆಯನ್ನು ಸಮಿತಿಯ ಗೌರವ ಅಧ್ಯಕ್ಷ ಬಸವರಾಜ ದೇಶಮುಖ ವಹಿಸಿದ್ದರು

ಸಭೆಯಲ್ಲಿ ಅಶೋಕ ಗುರೂಜಿ, ಕೈಲಾಸನಾಥ ದೀಕ್ಷಿತ, ಅಖ್ತರ ಇನಾಮದಾರ,

ಅಭಿಷೇಕ ಪಾಟೀಲ, ಆನಂದ ದೇಶಪಾಂಡೆ, ಭೀಮಶೆಟ್ಟಿ ಮುಕ್ಕಾ, ಅಸ್ಲಂ ಚೌಂಗೆ, ಶ್ರೀಧರ ಪಾಟೀಲ,ಮಹೇಶ ಬಿರಾದಾರ, ಶಿವಾನಂದ ಪಾಟೀಲ, ರವೀಂದ್ರ ದೊಡ್ಡಮನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶಿವಲಿಂಗೇಶ್ವರರ ಪಲ್ಲಕ್ಕಿ ಮಹೋತ್ಸವ

**ಕಲಬುರಗಿ:** ತಾಲ್ಲೂಕಿನ ಕೊಳ್ಳುರ ಗ್ರಾಮದಲಿ ಪ್ರತಿ ವರ್ಷದಂತೆ ಈ



ವರ್ಷವು ಕೂಡ ಜಗದ್ಗುರು ಶಿವಲಿಂಗೇಶ್ವರರ ಪಲ್ಲಕ್ಕಿ ಮಹೋತ್ಸವ ಮೃತ್ಯುಂಜಯ ಸ್ವಾಮಿಗಳ ನೇತೃತ್ವದಲ್ಲಿ ಡೊಳ್ಳು, ಭಜನೆ, ಪುರತಂತರು ಹಾಗೂ ನಾಡಿನ ಎಲ್ಲಾ ಹರಗುರು ಚರಮೂರ್ತಿಗಳ ಸಾನಿಧ್ಯದಲ್ಲಿ ಹಾಗು ರಾಜಕಾರಣಿಗಳ ಸುಮ್ಮುಖದಲ್ಲಿ ಜರುಗಲಿದೆ.

ಶಿವಲಿಂಗೇಶ್ವರರ ಪಲ್ಲಕ್ಕಿ ಮಹೋತ್ಸವ ಹಾಗು ಧರ್ಮ ಸಭೆ ನಡೆಯುತ್ತಿದ್ದು, ಗ್ರಾಮಸ್ಥರು ಹಾಗೂ ಸುತ್ತ ಮುತ್ತಲಿನ ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಭಾಗವಸಿ ಮಹಾ ಪ್ರಸಾದ ಸ್ವಿಕರಸಿ ಶಿವಲಿಂಗೇಶ್ವರರ ದರ್ಶನ ಪಡೆದು ಪುನೀತರಾಗಬೇಕೆಂದು ಮೃತ್ಯುಂಜಯ ಸ್ವಾಮಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಂಎಲ್ಸಿ ಡಾ. ಚಂದ್ರಶೇಖರ ಪಾಟೀಲ್ ವಿರುದ್ಧ ಶಾಸಕ ಡಾ. ಸಿದ್ದು ಪಾಟೀಲ್ ದೂರು



ಹುಮನಾಬಾದ್: ವಿಧಾನ ಪರಿಷತ್ ಸದಸ್ಯ ಡಾ ಚಂದ್ರಶೇಖರ ಪಾಟೀಲ್ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಒತ್ತಾಯಿಸಿ ಪಟ್ಟಣದ ಪೊಲೀಸ್ ಠಾಣೆಗೆ ಶಾಸಕ ಡಾ. ಸಿದ್ದು ಪಾಟೀಲ್ ಭಾನುವಾರ ತಮ್ಮ ಬೆಂಬಲಿಗರೊಂದಿಗೆ ಭೇಟಿ ನೀಡಿ ದೂರು ಸಲ್ಲಿಸಿದ್ದಾರೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೂತನ ಸಂಸದರು ಹಾಗೂ ವಿಧಾನ ಪರಿಷತ್ ಸದಸ್ಯರ ಅಭಿನಂದನ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹಿಂಖಾನ್ ಭಾಗವಹಿಸಿದ್ದ ಕಾರ್ಯಕ್ರಮದಲ್ಲಿಯೇ ಎಂಎಲ್ಸಿ ಡಾ. ಚಂದ್ರಶೇಖರ ಪಾಟೀಲ್ ಮಾತನಾಡುವಾಗ, ಶಾಸಕರ ನಾಲಿಗೆ ಕಟ್ ಮಾಡುತ್ತೇನೆ ಎಂದು ಬಹಿರಂಗ ವೇದಿಕೆಯಲ್ಲಿ ಮಾತನಾಡಿದ್ದಾರೆ. ನಾನು ಕ್ಷೇತ್ರದ ಜನರ ಆಶೀರ್ವಾದಿಂದ ಶಾಸಕನಾಗಿದ್ದೇನೆ. ಆದ್ದರಿಂದ ಇದು ನನ್ನ ನಾಲಿಗೆ ಕಟ್ ಮಾಡುವ ಮಾತಲ್ಲ, ಬದಲಿಗೆ ಕ್ಷೇತ್ರದ ಜನರ ನಾಲಿಗೆ ಕಟ್ ಮಾಡುತ್ತೇನೆ ಎಂಬ ಸಂದೇಶ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ವಿಧಾನ ಪರಿಷತ್ ಸದಸ್ಯರ ಹೇಳಿಕೆ ವಿರುದ್ಧ ಈಗಾಗಲೇ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ಹಿರಿಯ ಪೊಲೀಸ್ ಅಧಿಕಾರಿಗಳ ಹಾಗೂ ಪಕ್ಷದ ಮುಖಂಡರ ಗಮನಕ್ಕೂ ತರುತ್ತೇನೆ. ತಪ್ಪಿಸ್ತರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಅಧಿಕಾ–ರಿಗಳಿಗೆ ತಿಳಿಸಿದ್ದು, ಮುಂದಿನ 24 ಗಂಟೆಗಳಲ್ಲಿ ಪ್ರಕರಣ ದಾಖಲಿಸುವುದಾಗಿ ತಿಳಿಸಿದ್ದಾರೆಂದು ಹೇಳಿದರು. ಈ ಸಂದರ್ಭದಲ್ಲಿ ನೂರಾರು ಬಿಜೆಪಿ ಕಾರ್ಯಕರ್ತರು ಇದ್ದರು.

# ಪಾಲನೆಯಾಗದ ಗುರುತಿನ ಚೀಟಿ ಆದೇಶ: ದೂರು



ಬೀದರ್: ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ ಅಭಿಯಾನದಡಿ ಎಲ್ಲ ಸರ್ಕಾರಿ ನೌಕರರು ಕೆಂಪು–ಹಳದಿ ಬಣ್ಣದ ಗುರುತಿನ ಚೀಟಿಯ ಕೊರಳುದಾರ ಧರಿಸುವಂತೆ ಸರ್ಕಾರ ಹೊರಡಿಸಿರುವ ಆದೇಶ ಜಿಲ್ಲೆಯಲ್ಲಿ ಪಾಲನೆಯಾಗುತ್ತಿಲ್ಲ ಎಂದು ನಮ್ಮ ಕರ್ನಾಟಕ ಸೇನೆ ಆರೋಪಿಸಿದೆ.

ಸೇನೆಯ ಪದಾಧಿಕಾರಿಗಳು ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಜ್ಯಾಂತಿ ನೇತೃತ್ವದಲ್ಲಿ ನಗರದಲ್ಲಿ ಈಚೆಗೆ ನಿಯೋಗದಲ್ಲಿ ಜಿಲ್ಲಾಧಿಕಾರಿಗೆ ಬರೆದ ಮನವಿ ಪತ್ರವನ್ನು ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರಿಗೆ ಸಲ್ಲಿಸಿದರು.

ಗುರುತಿನ ಚೀಟಿ ಕೊರಳುದಾರ ಧರಿಸಬೇಕು. ಕಚೇರಿಗೆ ಸಮಯಕ್ಕೆ ಸರಿಯಾಗಿ ಬಾರದ ನೌಕರರ ವಿರುದ್ಧ ಕ್ರಮ ಜರುಗಿಸಬೇಕು. ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಬಯೊಮೆಟ್ರಿಕ್ ಹಾಜರಾತಿ ಯಂತ್ರ ಅಳವಡಿಸಬೇಕು ಎಂದು ಒತ್ತಾಯಿಸಿದರು.

ಸೇನೆಯ ಜಿಲ್ಲಾ ಘಟಕದ ಉಪಾಧ್ಯಕ್ಷ ರಾಜ–ಕುಮಾರ ಪಾಟೀಲ, ಪ್ರಧಾನ ಕಾರ್ಯದರ್ಶಿ ಸಂಜು ಯಾದವ್, ಗಿರೀಶ್ ಬಿರಾದಾರ, ಸಂತೋಷ ಪಾಟೀಲ, ದತ್ತು ಗಿರಿ, ಅನಿಲ್ ರಾಜಗೀರಾ, ರಾಮಶೆಟ್ಟಿ ಹುಣಜೆ, ಸೋಮನಾಥ ಪಾಟೀಲ, ಸೂರ್ಯಕಾಂತ ಪಾಟೀಲ, ಬಸವರಾಜ ಕಾರಬಾರಿ, ರಾಜಕುಮಾರ ಕೋಟೆ ಮತ್ತಿತರರು ಇದ್ದರು.

# ಸಮಾನತೆ ಸಮಾಜ ಕಟ್ಟಿದ ಶರಣರು



ಬೀದರ್: ಬಸವಾದಿ ಶರಣರು 12ನೇ ಶತಮಾನದಲ್ಲಿ ಸಮಾನತೆಯ ಸಮಾಜ ಕಟ್ಟಿದ್ದರು ಎಂದು ಬಸವ ಸೇವಾ ಪ್ರತಿಷ್ಠಾನದ ಡಾ. ಗಂಗಾಂಬಿಕೆ ಅಕ್ಕ ಹೇಳಿದರು.

ಇಲ್ಲಿಯ ಕೆ.ಎಚ್.ಬಿ. ಹುಡ್ಕೊ ಕಾಲೊನಿಯ ಬಸವ ಮಂಟಪದಲ್ಲಿ ಈಚೆಗೆ ನಡೆದ ಶ್ರಾವಣ ನಿಮಿತ್ತ ಹಮ್ಮಿಕೊಂಡಿದ್ದ ಒಂದು ತಿಂಗಳ ಪ್ರವಚನದ ಸಮಾರೋಪ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಜಾತಿ, ಮೇಲು–ಕೀಳು, ಬಡವ–ಬಲ್ಲಿದ ಎಂಬ ಭೇದ ಭಾವ ಇರಲಿಲ್ಲ. ಸ್ತ್ರೀಯರಿಗೆ ಸ್ವಾತಂತ್ರ್ಯ ಕಲ್ಪಿಸಲಾಗಿತ್ತು ಎಂದು ತಿಳಿಸಿದರು.

ಕಾಯಕ– ದಾಸೋಹದ ಮಹತ್ವವನ್ನು ಶರಣ–ರು ಸಾರಿದ್ದರು ಎಂದು ಹೇಳಿದರು.

ಪ್ರವಚನ ನಡೆಸಿಕೊಟ್ಟ ಶರಣಯ್ಯ ಸ್ವಾಮಿ ಅವರು ಶ್ರೀ ಶರಣಬಸವೇಶ್ವರ ಪವಾಡಗಳನ್ನು ವಿವರಿಸಿದರು. ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಶಕುಂತಲಾ ಬೆಲ್ದಾಳೆ ಮಾತನಾಡಿದರು. ಡಾ. ಎಸ್. ಸಿದ್ದಾರೆಡ್ಡಿ ಫೌಂಡೇಷನ್ ಅಧ್ಯಕ್ಷೆ ಗುರಮ್ಮ ಸಿದ್ದಾರೆಡ್ಡಿ ಅಧ್ಯಕ್ಷತೆ ವಹಿಸಿದ್ದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಚಿಂತಕಿ ಸುವರ್ಣಾ ಚಿಮಕೋಡೆ, ಸಾಹಿತಿ ಪುಣ್ಯವತಿ ವಿಸಾಜಿ, ಸೂಗಮ್ಮ ಜಿರೋಬೆ, ಪ್ರಶಾಂತ ದೊಡ್ಡಿ, ಝರೆಪ್ಪ ಮಮದಾಪುರೆ ಅತಿಥಿಯಾಗಿದ್ದರು.

ಕಸ್ತೂರಿ ಸ್ವಾಮಿ, ರಾಜೇಶ್ವರಿ ಶೀಲವಂತ, ವಿಜಯಲಕ್ಷ್ಮಿ ಪಾಟೀಲ, ನಾಗಮ್ಮ ಸಿರ್ಸಿ, ಜಗದೇವಿ ಮಾಶೆಟ್ಟಿ, ಶೋಭಾ ಸೋನಾಳೆ, ಕಲ್ಪನಾ, ನೀಲಾ, ಸುಜಾತಾ ಗುಡಿ, ಗೋದಾವರಿ, ಶರಣಪ್ಪ ಚಿಮಕೋಡೆ, ವಿಠ್ಠಲರಾವ್ ಸಿರ್ಸಿ, ಶಿವರಾಜ ಮಾಶೆಟ್ಟಿ, ರೋಹಿತ್ ಜಿರೋಬೆ, ಪುಟ್ಟು ಸ್ವಾಮಿ, ಪವನ್ ಮಾಶೆಟ್ಟಿ, ಶರಣಪ್ಪ ಪಾಟೀಲ ಮತ್ತಿತರರು ಪಾಲ್ಗೊಂಡಿದ್ದರು.

ಸುನೀತಾ ಜಿರೋಬೆ ನಿರೂಪಿಸಿದರು. ಶೋಭಾ ಜಿರೋಬೆ ಸ್ವಾಗತಿಸಿದರು. ಹೇಮಲತಾ ವೀರಶೆಟ್ಟಿ ವಂದಿಸಿದರು.

# ಲಕ್ಷಕ್ಕೂ ಅಧಿಕ ಮೌಲ್ಯದ ಪಡಿತರ ಅಕ್ಕಿ, ವಶ, ಇಬ್ಬರು ಆರೋಪಿತರ ಬಂಧನ

ಬೀದರ್: ಹಿರಿಯ ಅಧಿಕಾರಿಯವರ ಮಾರ್ಗದರ್ಶನದಂತೆ, ಬಗದಲ್ ಠಾಣಾ ವ್ಯಾಪ್ತಿಯ ಸಿರ್ಸಿ–ಬಾ ಗ್ರಾಮದ ರತ್ನಸಾಬ ದರ್ಗಾದ ಹತ್ತಿರ ಗುಡ್ಸ್ ಆಟೋದಲ್ಲಿ ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಟ ಮಾಡುತ್ತಿದ್ದ ಮಾಹಿತಿಯಂತೆ, ಬಗದಲ್ ಪೊಲೀಸ್ ಠಾಣೆಯ ಪಿ.ಎಸ್.ಐ ಶ, ಕಿರಣ ರವರು ತಮ್ಮ ಠಾಣೆಯ ಅಧಿಕಾರಿ/ಸಿಬ್ಬಂದಿಯವರಾದ ಎ.ಎಸ್.ಐ ಮಹಾದೇವಿ, ಸಿಬ್ಬಂದಿಗಳಾದ ರವಿಕಾಂತ, ಸಿದ್ದಪ್ಪಾ,, ಕಾಮಶೆಟ್ಟಿ ರವರೊಂದಿಗೆ, ಅರುಣ–ಕುಮಾರ, ಆಹಾರ ನಿರೀಕ್ಷಕರು, ಬೀದರ ಗ್ರಾಮೀಣ ರವರ ಸಮಕ್ಷಮ ದಾಳಿ ಮಾಡಿ 545 ಕೆ.ಜಿ ಪಡಿತರ ಅಕ್ಕಿ ಒಂದು ಗುಡ್ಸ್ ಆಟೋ ವಶ ಪಡಿಸಿಕೊಂಡು ಇಬ್ಬರು ಆರೋಪಿತರ ವಿರುದ್ಧ ಪ್ರಕರಣ ದಾಖಲಾಗಿರುತ್ತದೆ

ಹೀಗೆ ಒಟ್ಟು ಅ:ಕಿ: 1,18,530=00 ರೂಪಾಯಿ ಬೆಲೆ ಬಾಳುವ ಅಡಿತರ ಅಕ್ಕಿ ಮತ್ತು ಒಂದು ಗುಡ್ಸ್ ಆಟೋ ವಶ ಪಡಿಸಿಕೊಂಡ ಅಧಿಕಾ–ರಿ/ಸಿಬ್ಬಂದಿಯವರ ಕಾರ್ಯಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಶ್ಲಾಘಿಸಿದ್ದಾರೆ.

ಬೀದರ ಜಿಲ್ಲೆಯಲ್ಲಿ ಅಪರಾಧ ನಿಯಂತ್ರಣ–ಕ್ಕಾಗಿ ಜಿಲ್ಲೆಯ ಪೊಲೀಸರ ಕಾರ್ಯಾಚರಣೆಯು ಮುಂದುವರೆಯುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ. 15 ರಂದು ರಾಜ್ಯಾದ್ಯಂತ ಪ್ರಜಾಪ್ರಭುತ್ವ ದಿನಾಚರಣೆ ವಿನೂತನವಾಗಿ ಆಚರಣೆ: ಖಂಡ್ರೆ



ಬೀದರ, : ನಮ್ಮ ಸರಕಾರದ ತೀರ್ಮಾನದಂತೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಸೆಪ್ಟೆಂಬರ್. 15 ರಂದು ಕರ್ನಾಟಕ ರಾಜ್ಯದಾದ್ಯಂತ ವಿನೂತನವಾಗಿ ಆಚರಿಸಲಾಗುವುದು ಎಂದು ಅರಣ್ಯ. ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಹೇಳಿದರು.

ಅವರು ಶನಿವಾರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಕಾರಂಜಾ ಜಲಾಶಯದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿದರು.

ಬೀದರ ಜಿಲ್ಲೆಯಿಂದ ಚಾಮರಾಜನಗರ ಜಿಲ್ಲೆಯವರೆಗೆ ಒಟ್ಟು 2800 ಕಿ.ಲೋ ಮೀಟ–ರ್ ಮಾನವ ಸರಪಳಿ ರಚಿಸಲಾಗುತ್ತಿದೆ. ಜಗತ್ತಿಗೆ ಪ್ರಜಾಪ್ರಭುತ್ವದ ಪರಿಕಲ್ಪನೆ ನೀಡಿದ ಬಸವಕಲ್ಯಾಣದ ಅನುಭವ ಮಂಟಪದಿಂದ ಈ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುತ್ತಿರುವುದು ವಿಶೇಷವಾಗಿದೆ. ಬಸವಕಲ್ಯಾಣದಿಂದ ನಮ್ಮ ಜಿಲ್ಲೆಯ ಗಡಿ ಹಳ್ಳಿಖೇಡ ಕೆ. ವರೆಗೆ ಒಟ್ಟು 45 ಕಿ. ಮೀಟರ್ ಆಗಲಿದ್ದು 40 ಸಾವಿರ ಜನರು ಇದರಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಈ ಕುರಿತು ಈಗಾಗಲೇ ನಮ್ಮ ಅಧಿಕಾರಿಗಳು ಸುಮಾರು ಸಭೆಗಳನ್ನು ಮಾಡಿದ್ದಾರೆ. ಇದರಲ್ಲಿ ಜನ ಪ್ರತಿನಿಧಿಗಳು. ವಿವಿಧ ಶಾಲಾ– ಕಾಲೇಜುಗಳ ವಿದ್ಯಾರ್ಥಿಗಳು. ವಿವಿಧ ಸಂಘ– ಸಂಸ್ಥೆಗಳ ಅಧ್ಯಕ್ಷರು ಪದಾಧಿಕಾರಿಗಳು. ಸರಕಾರಿ ನೌಕರರು. ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಸದಸ್ಯರುಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದರು.

ಸಂವಿಧಾನದ ಆಶಯದಂತೆ ಸ್ವಾತಂತ್ರ್ಯ. ಸಮಾನತೆ. ಭಾತೃತ್ವ ಮತ್ತು ವಿವಿಧತೆಯಲ್ಲಿ ಏಕತೆ ನಮ್ಮ ಸಂವಿಧಾನದ ಆಶಯಗಳನ್ನು ಅನುಷ್ಠಾನಕ್ಕೆ ತರುವದಾಗಿದೆ. ಈ ಕುರಿತು ನಮ್ಮ ಮಕ್ಕಳಿಗೆ ಜಾಗೃತಿ ಮೂಡಿಸುವದರ ಜೊತೆಗೆ ದ್ವೇಷ, ಅಸೂಯೆ ಮತ್ತು ಮತಾಂಧತೆಯನ್ನು ಹೋಗಲಾಡಿಸುವ ಮೂಲಕ ಬಲಿಷ್ಠ ರಾಷ್ಟ್ರ ನಿರ್ಮಾಣ ಮಾಡಬೇಕಿದೆ ಅದಕ್ಕೆ ಪೂರಕವಾಗಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.


ಸೆಪ್ಟೆಂಬರ್. 15 ರಂದು ಬೆಳಿಗ್ಗೆ 8:30 ಕ್ಕೆ ಬಸವಕಲ್ಯಾಣ ಅನುಭವ ಮಂಟಪದಿಂದ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು. 45 ಕಿ. ಮೀಟರ್ ಮಾನವ ಸರಪಳಿ ರಚಿಸುವದರ ಜೊತೆಗೆ 1 ಕಿ.ಮೀ ಉದ್ದದ ನಮ್ಮ ರಾಜ್ಯದ ಧ್ವಜ ಹಾಗೂ ರಾಷ್ಟ್ರದ ಧ್ವಜವನ್ನು ಹಿಡಿದು ಮಕ್ಕಳು ಮುನ್ನಡೆಯುವರು. ಇದರಲ್ಲಿ ಸಂವಿಧಾನದ ಪೀಠಿಕೆಯ ವಾಚನ ಇರುತ್ತದೆ ಹಾಗಾಗಿ ಬೀದರ ಜಿಲ್ಲೆಯ ಹೆಚ್ಚಿನ ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಹೇಳಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂಖಾನ್, ಹುಮನಾಬಾದ ಶಾಸಕ ಡಾ. ಸಿದ್ದಲಿಂಗಪ್ಪ ಎನ್. ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಡಾ. ಎಂ.ಜಿ. ಮೂಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ್, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ, ಬ್ಯಾಲಹಳ್ಳಿ. ಕೆ. ಗ್ರಾಮ ಪಂಚಾಯತಿ ಅಧ್ಯಕ್ಷರಾದ ಅಶೋಕ ಜಾಧವ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಸಿಂಧು ಎಚ್.ಎಸ್. ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಸವಾದಿ ಶರಣರ ತತ್ವಗಳು ಸಾರ್ವಕಾಲಿಕ : ಮೂಲಗೆ

ಔರಾದ್ : ಬಸವಾದಿ ಶರಣರ ತತ್ವಗಳುಸಾರ್ವಕಾಲಿಕಪ್ರಸ್ತುತವಾಗಿದ್ದು, ಅವರ ಸಿದ್ಧಾಂತಗಳಲ್ಲಿ ಜಗತ್ತಿನ ಪ್ರಸ್ತುತ ಸಮಸ್ಯೆಗಳಿಗೆ ಪರಿಹಾರವಿದೆ. ಜೀವನ ಸಾರ್ಥಕತೆಗೆ ನಾವೆಲ್ಲ ಶರಣ ತತ್ವಗಳು ಅನುಸರಿಸುವುದು ಅಗತ್ಯ ಎಂದು ಕಸಾಪ ನಿಕಟಪೂರ್ವ ಅಧ್ಯಕ್ಷ, ಸಾಮಾಜಿಕ ಚಿಂತಕ ಜಗನ್ನಾಥ ಮೂಲಗೆ ನುಡಿದರು.

ತಾಲೂಕಿನ ನಾರಾಯಣಪೂರ ಗ್ರಾಮದಲ್ಲಿ ಶ್ರಾವಣ ಮಾಸದ ನಿಮಿತ್ತ ಬಿ.ಎಂ ಅಮರವಾಡಿ ನೇತೃತ್ವದಲ್ಲಿ ನಡೆದ ಒಂದು ತಿಂಗಳ ಪ್ರವಚನ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, 12ನೇ ಶತಮಾನದಲ್ಲಿ ಸಮಾನತೆ, ಮಹಿಳಾ ಪ್ರಾತಿನಿಧ್ಯ ಮತ್ತು ಮುಕ್ತ ಚಿಂತನೆಗಳಿಗೆ ಅವಕಾಶ ಮಾಡಿಕೊಟ್ಟ ಬಸವಣ್ಣ ಕಾಯಕ ಮತ್ತು ದಾಸೋಹ ಸಂಸ್ಕೃತಿಯ ಮೂಲಕ ಶರಣ ತತ್ವ ಜಗತ್ತಿನಾದ್ಯಂತ ಬೆಳಗುವಂತೆ ಮಾಡಿದ್ದು ಕನ್ನಡ ನಾಡಿನ ಹಿರಿಮೆಯಾಗಿದೆ.ಮಹಾತ್ಮ ಬುದ್ಧ, ಯೇಸು, ಗುರುನಾನಕ್, ಸಂತ ತುಕಾರಾಮ, ಕನಕದಾಸರು ಸೇ–



ರಿದಂತೆ ಎಲ್ಲ ದಾರ್ಶನಿಕರ ವಿಚಾರಗಳು ಮಾನವೀಯತೆಯ ದ್ಯೋತಕವಾಗಿದ್ದು ಎಲ್ಲ ಧರ್ಮದ ಸಾರ ಒಂದೇಯಾಗಿದೆ ಎಂದರು.

ಸಂಪನ್ಮೂಲ ಶಿಕ್ಷಕ ಪ್ರಕಾಶ ದೇಶಮುಖ ಮಾತನಾಡಿ, ಅಲ್ಲಮ ಪ್ರಭುದೇವರ ವಚನಗಳ ಮೂಲಕ ಶರಣ ತತ್ವದ ಸಾರ ಉಣಬಡಿಸಿದ ಬಾಲಾಜಿ ಅಮರವಾಡಿ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ, ಸಂತ ಮಹಾತ್ಮರ ಆದರ್ಶ ಬದುಕು ನಮ್ಮ ಜೀವನದ ಆಚರಣೆಯಾಗಬೇಕು ಎಂದರು.

ಪ್ರವಚನಕಾರ ಬಿಎಂ ಅಮರವಾಡಿ ಮಾತನಾಡಿ, ಶ್ರಾವಣ ಎಂಬುದು ಈ ಮಾಸಕ್ಕೆ ಸೀಮಿತವಾಗದೇ ನಿತ್ಯವೂ ಶ್ರಾವಣವಾಗಿ ನಮ್ಮ ಬಾಳಿನ ಸಾಥ–ರ್ಕತೆಗೆ ಮುನ್ನುಡಿ ಬರೆಯಬೇಕು. ನಾರಾಯಣಪೂರ ಗ್ರಾಮಸ್ಥರ ಪ್ರೀತಿ, ಕರುಣೆಗೆ ಮಾತುಗಳೇ ಬಾರದಂತಾಗಿದೆ ಎಂದರು. ಇದೇ ಸಂದರ್ಭದಲ್ಲಿ ಸಂಗೀತ ಕಲಾವಿದರು ಹಾಗೂ ಸೌಹಾರ್ದತೆ ಬಯಸುವ ಗ್ರಾಮದ ಹಿರಿಯರಿಗೆ ಗೌರವಿಸಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ವಡಮುರ್ಗೆ, ದತ್ತು ಪಾಂಚಾಳ, ಬಸವರಾಜ ಬಿರಾದಾರ್, ಶರಣಪ್ಪ ಡೋಣಗಾವೆ, ಶಿವಕುಮಾರ ಬಿರಾದಾರ್, ಕಲ್ಲಪ್ಪ ದೇಶಮುಖ, ಮನ್ಮತಪ್ಪ ಹುಗ್ಗೆ, ಶರಣಪ್ಪ ನಾಗಲಗಿದ್ದೆ, ಧನರಾಜ ನಿಟ್ಟೂರೆ, ಚಂದ್ರಕಾಂತ ಘುಳೆ, ಧನರಾಜ ಮಾನೆ, ಮಹಾದೇವ ಘುಳೆ, ಯಶವಂತರಾವ ಡೋಂಬಾಳೆ, ಕಲ್ಯಾಣರಾವ ಶೆಂಬೆಳ್ಳೆ, ಅಂಬಾದಾಸ ನೆಳಗೆ, ಶಿವರಾಜ ಕಸ್ತೂರೆ, ಅಮೃತರಾವ ಬಿರಾದಾರ್, ಸಂತೋಷ ವಡಮುರ್ಗೆ, ನೆಹರು ಚಿದ್ರೆ, ಶಿವರಾಜ ಬಿರಾದಾರ್, ಸಂಜೀವ ಸೇರಿದಂತೆ ಇನ್ನಿತರರಿದ್ದರು.

# ವಿಶ್ವಕರ್ಮ ಜಯಂತಿ, ಆರೋಗ್ಯ ತಪಾಸಣಾ ಶಿಬಿರ

ಬೀದರ್: ವಿಶ್ವಕರ್ಮ ಜಯಂತಿ ನಿಮಿತ್ತ ನಗರದ ಗುರುಪಾದಪ್ಪ ನಾಗಮಾರಪಳ್ಳಿ ಮಲ್ಟಿಸ್ಪೇಷಾಲಿಟಿ ಸಹಕಾರ ಆಸ್ಪತ್ರೆಯು ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿತ್ತು.

ನಗರದ ಮೌನೇಶ್ವರ ದೇವಸ್ಥಾನದಲ್ಲಿ ನಡೆದ ಶಿಬಿರದಲ್ಲಿ ಆರೋಗ್ಯ ತಪಾಸಣೆಯ ಜೊತೆಗೆ ರಕ್ತ ತಪಾಸಣೆಯೂ ನಡೆಯಿತು. ಬಡಾವಣೆಯ ನಿವಾಸಿಗಳು ಶಿಬಿರದ ಪ್ರಯೋಜನ ಪಡೆದುಕೊಂಡರು.




ವಿಶ್ವಕರ್ಮ ಸಮಾಜದ ಜಿಲ್ಲಾ ಅಧ್ಯಕ್ಷ ಮಹೇಶ ಪಾಂಚಾಳ್, ಉಪಾಧ್ಯಕ್ಷ ಪಾಂಡುರಂಗ ವಿಶ್ವಕರ್ಮ, ಖಜಾಂಚಿ ನಾರಾಯಣ ವಿಶ್ವಕರ್ಮ, ಪ್ರಧಾನ ಕಾರ್ಯದರ್ಶಿ ಶಿವಾನಂದ ವಿಶ್ವಕರ್ಮ, ಪ್ರಮುಖರಾದ ಚಂದ್ರಕಲಾ ವಿಶ್ವಕರ್ಮ, ವೈಜನಾಥ, ಜಗನ್ನಾಥ್, ಮಹೇಶ್ವರಿ ಪಂಚಾಳ್, ರಾಜಕುಮಾರ ಹಳ್ಳದಕೇರಿ, ಸೂರ್ಯಕಾಂತ್ ವಿಶ್ವಕರ್ಮ, ಸರ್ವೇಶ್, ಶ್ರೀದೇವಿ, ಸುಲೋಚನಾ, ಉಮೇಶ, ಶಾಮರಾವ್, ಬಾಬುರಾವ್ ಚಾಂಬೋಳ್, ಬಾಬುರಾವ್ ಚಿಮಕೋಡ, ಸಿದ್ಧಾರೂಢ ವಿಶ್ವಕರ್ಮ, ಶ್ರೀಕಾಂತ್, ಸಂಗೀತಾ ಮುಂತಾದವರು ಉಪಸ್ಥಿತರಿದ್ದರು. ಭಗವಾನ್ ವಿಶ್ವಕರ್ಮ ಜಯಂತಿ ನಿಮಿತ್ತ ಗುರುಪಾದಪ್ಪ ನಾಗಮಾರಪಳ್ಳಿ ಸಹಕಾರ ಆಸ್ಪತ್ರೆ ಅಧ್ಯಕ್ಷ ಸೂರ್ಯಕಾಂತ್ ನಾಗಮಾರಪಳ್ಳಿ, ಉಪಾಧ್ಯಕ್ಷ ತರುಣ್ ಸೂರ್ಯಕಾಂತ್ ನಾಗಮಾರಪಳ್ಳಿ ಅವರು ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದು ಸಮಾಜದ ಪ್ರಮುಖರು ಮೆಚ್ಚುಗೆ ವ್ಯಕ್ತಪಡಿಸಿದರು.

# ಕೇಂದ್ರ ಸರ್ಕಾರದ ಸಾಧನೆ ಮನೆಮನೆಗೆ ತಿಳಿಸಿ: ಈಶ್ವರಸಿಂಗ್ ಠಾಕೂರ್

ಬೀದರ್: ಭಾರತೀಯ ಜನತಾ ಪಾರ್ಟಿ ಬೀದರ್ ಗ್ರಾಮಾಂತರ ಮಂಡಲದ ವತಿಯಿಂದ ಇಂದು ಗಾದಗಿ ಗ್ರಾಮದಲ್ಲಿ ಸದಸ್ಯತ ಅಭಿಯಾನದ ಚಾಲನೆಯನ್ನು ನೀಡಲಾಯಿತು.

ಈ ವೇಳೆ ಮಾತನಾಡಿದ ಭಾರತೀಯ ಜನತಾ ಪಕ್ಷದ ವಿಭಾಗೀಯ ಸಹಪ್ರಭಾರಿ ಹಾಗೂ ಬೀದರ ವಿಧಾನಸಭಾ ಕ್ಷೇತ್ರದ ನಾಯಕ ಈಶ್ವರಸಿಂಗ್ ಠಾಕೂರ್ ಮಾತನಾಡಿ ಭಾರತೀಯ ಜನತಾ ಪಕ್ಷದ ಕಾರ್ಯಕರ್ತರು ಮನೆ ಮನೆಗೆ ತೆರಳಿ ಕೇಂದ್ರ ಸರ್ಕಾರದ ಸಾಧನೆಗಳನ್ನು ಹೇಳಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇದ್ದಾಗ ಮಾಡಿರುವ ಸಾಧನೆಗಳನ್ನು ಹೇಳಿ ಪ್ರತಿಯೊಬ್ಬರಿಗೂ ಕೂಡ 8800002024 ಸಂಖ್ಯೆಯನ್ನು ಡಯಲ್ ಮಾಡುವ ಮುಖಾಂತರ ಸದಸ್ಯರನ್ನಾಗಿ ಮಾಡಿ



ಭಾರತೀಯ ಜನತಾ ಪಾರ್ಟಿಯನ್ನು ಮನೆಮನೆ ಪಾರ್ಟಿ ಮಾಡಬೇಕೆಂದು ಕರೆಯನ್ನು ನೀಡಿದರು. ಹಾಗೂ ಕ್ಷೇತ್ರದ ಜನರ ಸುಖ ದುಃಖದಲ್ಲಿ ಭಾಗಿಯಾಗಿ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗಾಗಿ ನಾನು ಪ್ರಮಾಣಿಕವಾಗಿ ಪ್ರಯತ್ನ ಮಾಡುವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಭಾರತೀಯ ಜನತಾ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿರಪ್ಪ ಅವರಾದೆ ರವರು ಸದಸ್ಯತ್ವ ಅಭಿಯಾನದ ವಿವರವನ್ನು ಕಾರ್ಯಕರ್ತರಿಗೆ ತಿಳಿಸಿಕೊಟ್ಟರು. ಹಾಗೂ ಮಂಡಲದ ಅಧ್ಯಕ್ಷರಾದ ದೀಪಕ್ ಗಾದಗೆ ಪ್ರಾಸ್ತಾವಿಕ ಮಾತನಾಡಿದರು. ಬೀದರ್ ಗ್ರಾಮಾಂತರ ಮಂಡಲ ಉಸ್ತುವಾರಿಗಳಾದ ಶ್ರೀಮತಿ ಲುಂಬಿಣಿ ಗೌತಮ್ ಅವರು ಪಕ್ಷದ ಗಟ್ಟಿತನಕ್ಕೆ ಕರೆ ನೀಡಿದರು. ಗಾಂಧಿ ಗಂಜ್ ಬ್ಯಾಂಕಿನ ಅಧ್ಯಕ್ಷರು ಹಾಗೂ ಪಕ್ಷದ ಮುಖಂಡರಾದ ವಿಜಯಕುಮಾರ್ ಪಾಟೀಲ್ ಗಾದಗಿ ಪಕ್ಷದ ಮುಖಂಡರಾದ ಕುಶಾಲ್ ಪಾಟೀಲ್ ಗಾಗಿ ಹಾಗೂ ನಿಕಟ ಪೂರ್ವ ಮಂಡಲ ಅಧ್ಯಕ್ಷರಾದ ರಾಜೇಂದ್ರ ಪೂಜಾರಿ, ಪ್ರಶಿಕ್ಷಣ ಪ್ರಕೋಷ್ಠತ ರಾಜ್ಯ ಸಂಚಾಲಕ ರಾಜಶೇಖರ ನಾಗಮೂರ್ತಿ, ಜಿಲ್ಲಾ ಕಾರ್ಯದರ್ಶಿ ರಾಜಕುಮಾರ ಪಾಟೀಲ್ ನೆಮ್ಮಾಬಾದ್, ಗ್ರಾಮಾಂತರ ಮಂಡಲ ಪ್ರಧಾನ ಕಾರ್ಯದರ್ಶಿ ಪ್ರಕಾಶ್ ಕಿಂಡಿ, ನಾಗೇಂದ್ರ ಪಾಟೀಲ್ ಪಾರ್ಟಿಯ ಮಂಡಲ ಪದಾಧಿಕಾರಿಗಳು, ಪ್ರಧಾನ ಕಾರ್ಯದರ್ಶಿಗಳು, ಮಹಾಶಕ್ತಿ ಕೇಂದ್ರದ ಅಧ್ಯಕ್ಷರು ಪ್ರಧಾನ ಕಾರ್ಯದರ್ಶಿಗಳು ಪಾರ್ಟಿಯ ಪದಾಧಿಕಾರಿಗಳು ಗಾದಗಿ ಗ್ರಾಮದ ಸಾರ್ವಜನಿಕರು ನೂರಾರು ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ಹಳೆಯ ವಿದ್ಯಾರ್ಥಿಗಳು ಕಾಲೇಜಿನ ಅಭಿವೃದ್ಧಿಗೆ ಶ್ರಮಿಸೋಣ: ನಂದಕಿಶೋರ ವರ್ಮಾ

ಬೀದರ್: 1970 ರ ಬ್ಯಾಚ್ ನ ವಿದ್ಯಾರ್ಥಿಯಾದ ನಾನು ಕರ್ನಾಟಕ ಕಾಲೇಜಿನಿಂದ ಶಿಸ್ತು, ಸಂಯಮ, ಸಂಸ್ಕಾರ ಮತ್ತು ದೇಶಭಕ್ತಿ ಕಲಿತಿದ್ದೇನೆ. ಹಳೆಯ ವಿದ್ಯಾರ್ಥಿಗಳೆಲ್ಲ ಸೇರಿ ಕಾಲೇಜಿನ ಅಭಿವೃದ್ಧಿಗೆ ಶ್ರಮಿಸೋಣ ಎಂದು ಸಂಘದ ಗೌರವಾಧ್ಯಕ್ಷ ನಂದಕಿಶೋರ ವರ್ಮಾ ತಿಳಿಸಿದರು.

ಕರ್ನಾಟಕ ಕಾಲೇಜಿನ ಸಭಾಂಗಣದಲ್ಲಿ ಕಾಲೇಜಿನ ಹಳೆಯ ವಿದ್ಯಾರ್ಥಿಗಳ ಸಂಘದ 8ನೇ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ನಮ್ಮನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ದ ಕಾಲೇಜಿನ ಸಮಸ್ಯೆಗಳನ್ನು ಬಗೆಹರಿಸಲು ಪ್ರಯತ್ನಿಸೋಣ. ಬಡ ವಿದ್ಯಾರ್ಥಿಗಳಿಗೆ ಸಹಾಯಹಸ್ತ ಚಾಚಿ ಸ್ಫೂರ್ತಿ ನೀಡುವ ಅವಶ್ಯಕತೆ ಇದೆ ಎಂದರು.




ಕರ್ನಾಟಕ ಕಾಲೇಜಿನ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಸೂರ್ಯಕಾಂತ ಶೆಟಕಾರ ಮಾತನಾಡಿ ಸಂಘದ ಲೆಕ್ಕಪತ್ರಗಳನ್ನು ಮಂಡಿಸಿದರು. ಹಳೆಯ ವಿದ್ಯಾರ್ಥಿ ನಿವೃತ್ತ ಪ್ರಾಂಶುಪಾಲರಾದ ಪ್ರೊ. ಜಗನ್ನಾಥ ಹೆಬ್ಬಾಳೆ ಅನುಮೋದಿಸಿದರು. ಸಭೀಕರು ಕರತಾಡನ ಮೂಲಕ ಒಪ್ಪಿಗೆ ಸೂಚಿಸಿದರು.

ವೇದಿಕೆ ಮೇಲೆ ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ವೀರಭದ್ರಪ್ಪ ಬುಯ್ಯಾ, ಸಿದ್ಧರಾಜ ಪಾಟೀಲ, ಉಪ ಪ್ರಾಚಾರ್ಯ ಅನೀಲಕುಮಾರ ಚಿಕ್ಕಮಣೂರ, ಪ್ರಮುಖರಾದ ಪದ್ಮಜಾ ಪೊದ್ದಾರ್, ಶಿವಶಂಕರ ಉಪ್ಪಿನ್, ಡಾ. ರಾಣಿಬಾಯಿ ಪಾಟೀಲ, ಪದ್ಮಿನಿ ಕಾಜಿ ಉಪಸ್ಥಿತರಿದ್ದರು.

ಹಳೆಯ ವಿದ್ಯಾರ್ಥಿಗಳಾದ ತೆಲಂಗಾಣ ಎಚ್.ಡಿ.ಎಫ್.ಸಿ. ವ್ಯವಸ್ಥಾಪಕ ಅರುಣಕುಮಾರ, ಪ್ರೊ. ಸಂಗಶೆಟ್ಟಿ ಶೆಟಕಾರ, ಪದ್ಮಜಾ ಪೊದ್ದಾರ ಹಳೆಯ ನೆನಪುಗಳ ಮೇಲೆ ಬೆಳಕು ಚೆಲ್ಲಿದರು. ಹಳೆಯ ವಿದ್ಯಾರ್ಥಿಗಳಿಗಾಗಿ ವಿವಿಧ ಸ್ಪರ್ಧೆಗಳಾದ ಸೋಲೊ ನೃತ್ಯ ಹಾಗೂ ಹಾಡುಗಳು, ಮೆಹೆಂದಿ ಬಿಡಿಸುವುದು, ರಂಗೋಲಿ ಸ್ಪರ್ಧೆ ಹಮ್ಮಿಕೊಳ್ಳಲಾಗಿತ್ತು. ವಿಜೇತರಿಗೆ ಬಹುಮಾನ ವಿತರಿಸಲಾಯಿತು. ನಿವೃತ್ತ ಪ್ರಾಧ್ಯಾಪಕರನ್ನು ಸನ್ಮಾನಿಸಲಾಯಿತು.

# ಚಕ್ಕಡಿ ಸಮೇತ ಬಾವಿಗೆ ಬಿದ್ದ ಎತ್ತುಗಳ ಸಾವು



ದೇವರಹಿಪ್ಪರಗಿ: ಎತ್ತಿನಗಾಡಿ (ಚಕ್ಕಡಿ)ಗೆ ಕಟ್ಟಿದ್ದ ಎತ್ತುಗಳು ಬೆದರಿ ಬಾವಿಗೆ ಬಿದ್ದು ಸಾವಿಗೀಡಾದ ಘಟನೆ ಪಡಗಾನೂರ ಗ್ರಾಮದಲ್ಲಿ ಜರುಗಿದೆ. ತಾಲ್ಲೂಕಿನ ಪಡಗಾನೂರ ಗ್ರಾಮದ ಯಮನಪ್ಪ ವಡ್ಡೋಡಗಿ ಎಂಬುವವರಿಗೆ ಸೇರಿದ ಅಂದಾಜು 1.50 ಲಕ್ಷ.ರೂ ಮೌಲ್ಯದ ಎರಡು ಎತ್ತುಗಳನ್ನು ಎತ್ತಿನಗಾಡಿಗೆ ಕಟ್ಟಿ ಅವುಗಳಿಗೆ ಮೇವು ತರಲು ತೆರಳಿದ ಸಂದರ್ಭದಲ್ಲಿ ಏಕಾಏಕಿ ಬೆದ–ರಿದ ಎತ್ತುಗಳು ಕಟ್ಟಿದ್ದ ಗಾಡಿಯ ಸಮೇತ ಸಮೀಪದ ಭಾವಿಗೆ ಬಿದ್ದಿವೆ. ಬಹುತೇಕ ತುಂಬಿದ್ದ ಭಾವಿಯಲ್ಲಿ ಎತ್ತುಗಳು ಈಜಬಹುದಾಗಿದ್ದರೂ ಗಾಡಿಗೆ ಕಟ್ಟಿದ್ದ ಕಾರಣ ಈಜಲಾಗದೇ ಅಸುನೀಗಿವೆ. ಘಟನಾ ಸ್ಥಳಕ್ಕೆ ಪಶು ವೈದ್ಯಕೀಯ ಆಸ್ಪತ್ರೆಯ ತಾಲ್ಲೂಕು ಸಹಾಯಕ ನಿರ್ದೇಶಕ ಭೀಮಾಶಂಕರ ಭೇಟಿ ನೀಡಿ ಪರಿಶೀಲಿಸಿದ್ದಾರೆ.

# ಪಿಎಂ ಕಿಸಾನ್ ಯೋಜನೆ ಆರ್ಥಿಕ ನೆರವಿಗೆ ಇಕೆವೈಸಿ ಕಡ್ಡಾಯ

ವಿಜಯಪುರ: ಪಿಎಂಕಿಸಾನ್ ಯೋಜನೆಯಡಿ ನೋಂದಾಯಿತ ರೈತರು ಯೋಜನೆಯ ಆರ್ಥಿಕ ನೆರವು ಪಡೆಯಲು ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿದ್ದು, ಈಗಾಗಲೇ ಜಿಲ್ಲೆಯ ನೋಂದಾಯಿತ 248694 ಅರ್ಹ ರೈತರ ಪೈಕಿ 228933 ರೈತರು ಇ–ಕೆವೈಸಿ ಮಾಡಿಸಿಕೊಂಡಿದ್ದು, ಉಳಿದ 19761 ರೈತರು ಕೂಡಲೇ ಇ–ಕೆವೈಸಿ ಮಾಡಿಸಿಕೊಳ್ಳುವಂತೆ ಕೃಷಿ ಇಲಾಖೆ ಜಂಟಿ ನಿರ್ದೇಶಕರು ಮನವಿ ಮಾಡಿಕೊಂಡಿದ್ದಾರೆ.

ಇ–ಕೆವೈಸಿ ಮಾಡಿಸಿಕೊಳ್ಳದ ನೋಂದಾಯಿತ ರೈತರಿಗೆ ಮುಂದಿನ ಕಂತಿನ ಹಣ ಬಿಡುಗಡೆಯಾಗುವುದಿಲ್ಲ. ಇಕೆವೈಸಿ ಬಾಕಿ ಇರುವ ನೋಂದಾಯಿತ ರೈತರು ತಮ್ಮ ಗ್ರಾಮಕ್ಕೆ ಈಗಾಗಲೇ ನೇಮಿಸಲಾದ ಗ್ರಾಮ ಮಟ್ಟದ ನೋಡಲ್ ಅಧಿಕಾರಿ ಅಥವಾ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾ–ರಿಗಳನ್ನು ಸಂಪರ್ಕಿಸಿ ಕೂಡಲೇ ಇ–ಕೆವೈಸಿ ಮಾಡಿಕೊಳ್ಳಬೇಕು. ಒಂದೇ ಕುಟುಂಬ ಸದಸ್ಯರೆ ಎಂಬುದನ್ನು ಪರಿಶೀಲಿಸಿ ಅರ್ಹ – ಅನರ್ಹರೆಂದು ಘೋಷಿಸಬೇಕಾಗಿರುವ 31148 ಪ್ರಕರಣಗಳು ಬಾಕಿ ಇದ್ದು, ಈ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಇಬ್ಬರು ಸದಸ್ಯರು ಖುದ್ದಾಗಿ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ನಿಗದಿತ ನಮೂನೆಯಲ್ಲಿ ಘೋಷಣೆಯನ್ನು ಸಲ್ಲಿಸಬೇಕು. ಘೋಷಣೆ ಸಲ್ಲಿಸದೇ ಇದ್ದಲ್ಲಿ ಅಂತಹ ಪ್ರಕರಣಗಳಿಗೆ ಮುಂದಿನ ಕಂತಿನ ಆರ್ಥಿಕ ನೆರವು ಸ್ಥಗಿತಗೊಳ್ಳುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜಯಪುರ: ನಾಮನಿರ್ದೇಶನಗಳ ಆಹ್ವಾನ

ವಿಜಯಪುರ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2017ನೇ ಸಾಲಿನಿಂದ 2023ನೇ ಸಾಲಿನವರೆಗೆ ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಅರ್ಹ ಪತ್ರಕರ್ತರು / ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರಿಂದ ನಾಮನಿರ್ದೇಶನಗಳನ್ನು ಆಹ್ವಾನಿಸಿದೆ.

ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಾಗೂ ಪರಿಸರ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಅಪೂರ್ವ ಸಾಧನೆ ಮಾಡಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ನೀಡಲು 2001ರಲ್ಲಿ ರಾಜ್ಯ ಸರ್ಕಾರವು ಆದೇಶ ಹೊರಡಿಸಿತು. ಅದರಂತೆ 2001ರಿಂದ 2016ರ ವರೆಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಅರ್ಹ ಪತ್ರಕರ್ತರನ್ನು ಗುರುತಿಸಿ ಪ್ರಶಸ್ತಿಗಳನ್ನು ನೀಡುತ್ತಾ ಬಂದಿದೆ. 2017ನೇ ಸಾಲಿನಿಂದ 2023ನೇ ಸಾಲಿನವರೆಗೆ ಅರ್ಹ ಪತ್ರಕರ್ತರಿಗೆ ಈ ಪ್ರಶಸ್ತಿಗಳನ್ನು ನೀಡುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ.

ಪರಿಸರ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರಕ್ಕೆ ಅನುಪಮ ಕೊಡುಗೆ ನೀಡಿರುವ ಹಾಗೂ ಪತ್ರಿಕೋದ್ಯಮದಲ್ಲಿ ಕನಿಷ್ಠ 10 ವರ್ಷಗಳ ಅನುಭವ ಹೊಂದಿರುವ ಅರ್ಹ ಪತ್ರಕರ್ತರನ್ನು ಸಾರ್ವಜನಿಕರು, ಸಂಘ ಸಂಸ್ಥೆಗಳು ನಾಮನಿರ್ದೇಶನ ಮಾಡಬಹುದು ಅಥವಾ ವೈಯುಕ್ತಿಕವಾಗಿ ಸ್ವಯಂ ಅರ್ಜಿ ಸಲ್ಲಿಸಬಹುದು.

2017 ರಿಂದ 2023 ರ ಅವಧಿಯ ಎರಡೂ ವಿಭಾಗಗಳ ಪ್ರಶಸ್ತಿಗಳಿಗೆ ತಲಾ 7 ಅರ್ಹ ಪತ್ರಕರ್ತರನ್ನು ಆಯ್ಕೆ ಮಾಡಲಾಗುವುದು. ಈ ಪ್ರಶಸ್ತಿಯ ಮೊತ್ತ ಒಂದು ಲಕ್ಷ ರೂ. ನಗದು ಪುರಸ್ಕಾರ, ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆಯನ್ನು ಹೊಂದಿರುತ್ತದೆ.

ಅರ್ಜಿಗಳು / ನಾಮನಿರ್ದೇಶನಗಳನ್ನು ಮಾನ್ಯ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾಸೌಧ, ಭಗವಾನ್ ಮಹಾವೀರ ರಸ್ತೆ, (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು 560001 ಇಲ್ಲಿಗೆ ಅಥವಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಧಿಕಾರಿಗಳಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಅಥವಾ ಇ–ಮೇಲ್ ವಿಳಾಸ ಣಡಿಚಿಡಿಚಿಡಿಜ@ ರಟಚಿಟ.ಛಿಂಟ ಗೆ ದಿನಾಂಕ:30–09–2024ರ ಸಂಜೆ 5.00 ಗಂಟೆಯ ಒಳಗಾಗಿ ಸಲ್ಲಿಸಬಹುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರ್.ಡಿ.ಪಾಟೀಲ ಕಾಲೇಜಿಗೆ ಸಮಗ್ರ ವೀರಾಗ್ರಣಿ ಪ್ರಶಸ್ತಿ



ಸಿಂದಗಿ: ಶಾಲಾ ಶಿಕ್ಷಣ ಇಲಾಖೆ ಪದವಿ ಪೂರ್ವ ಮಹಾವಿದ್ಯಾಲಯಗಳ ತಾಲೂಕಾ ಮಟ್ಟದ ಗುಂಪು ಆಟಗಳಲ್ಲಿ ಬಾಲಕರ ಖೋಖೋ ಪ್ರಥಮ, ಬಾಲಕರ ವ್ಹಾಲಿಬಾಲ್ ಪ್ರಥಮ, ಬಾಲಕಿಯರ ಕಬಡ್ಡಿ ಪ್ರಥ–ಮ, ಬಾಲಕಿಯರ ವ್ಹಾಲಿಬಾಲ್ ದ್ವಿತೀಯ, ಬಾಲಕಿಂ–ಯರ ಖೋಖೋ ದ್ವಿತೀಯ, ಬಾಲಕರ ಹಾಗೂ ಬಾಲಕಿಯರ ಟೆನಿಕ್ವಾಯಿಟ್ ದ್ವಿತೀಯ ಸ್ಥಾನಗಳನ್ನು ಪಟ್ಟಣದ ಆರ್.ಡಿ.ಪಾಟೀಲ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯದ 30 ಜನ ವಿದ್ಯಾರ್ಥಿಗಳು ಸಮಗ್ರ ವೀರಾಗ್ರಣಿ ಪ್ರಶಸ್ತಿಯನ್ನು ಪಡೆದುಕೊಂಡು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಈ ಸಾಧನೆಗೆ ಮಾರ್ಗದರ್ಶನ ನೀಡಿದ ದೈಹಿಕ ಉಪನ್ಯಾಸಕ ಗವಿಸಿದ್ದಪ್ಪ ಆನೆಗುಂದಿ ಹಾಗೂ ವಿದ್ಯಾರ್ಥಿಗಳಿಗೆ ಸಂಸ್ಥೆಯ ಚೇರಮನ್ನರಾದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು, ಆಡಳಿತ ಮಂಡಳಿಯ ಸರ್ವ ಸದಸ್ಯರು, ಪ್ರಾಚಾರ್ಯ ಭೀಮನಗೌಡ ಸಿಂಗನಳ್ಳಿ, ಉಪಪ್ರಾಚಾರ್ಯ ಪಿ.ವ್ಹಿ.ಮಹಲಿನಮಠ, ಎಸ್.ಎಚ್. ಜಾಧವ, ಸುನೀಲ ಪಾಟೀಲ, ಎನ್.ಬಿ.ಪೂಜಾರಿ, ಪ್ರಸನ್ನ ಜೋಗೂರ, ಎಸ್.ಎಸ್.ತಾಳಿಕೋಟಿ, ಶಿವಶರಣ ಬೂದಿಹಾಳ, ಬಿ.ಬಿ.ಜಮಾದಾರ, ಶಿವರಾಜ ಕುಂದಗೋಳ, ಸಂಗಮೇಶ ಚಾವರ, ಎನ್.ಎಂ.ಶೆಳ್ಳಗಿ, ರೋಹಿತ ಸುಲ್ಪಿ, ರಾಹುಲ ನಾರಾಯಣಕರ್, ಸ್ನೇಹಾ ಕುಲಕರ್ಣಿ, ಸ್ನೇಹಾ ಧರಿ, ಲಕ್ಷ್ಮೀ ಕನ್ನೊಳ್ಳಿ, ಎಸ್.ಎಸ್. ಹೂಗಾರ, ರಾಹುಲ ದಾಸರ್, ಐ.ಎಸ್.ಸಿಂಪಗೇರ್ ಸೇರಿದಂತೆ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ.

### ರಾಷ್ಟ್ರೀಯ ಹೆದ್ದಾರಿ ಭೂಮಿ ಪೂಜೆ ನೆರವೇರಿಸಿದ ಸಂಸದ ರಮೇಶ ಜಿಗಜಿಣಗಿ ಮಾಹಿತಿ

# ಜಿಲ್ಲೆ ಅಭಿವೃದ್ಧಿಗೆ ಈವರೆಗೆ ರೂ.1.10 ಸಾವಿರ ಕೋಟಿ ಅನುದಾನ



ಇಂಡಿ: ನಾನು ಪ್ರಚಾರಪ್ರೀಯನಲ್ಲ. ಸದ್ದಿಲ್ಲದೆ ಅಭಿವೃದ್ಧಿ ಕೆಲಸ ಮಾಡಿ ಮುಗಿಸಿ ತೃಪ್ತಿಪಡುವುದು ನನ್ನ ಸ್ವಭಾವವಾಗಿದೆ. ಕಳೆದ 10 ವರ್ಷಗಳಲ್ಲಿ ವಿಜಯಪುರ ಜಿಲ್ಲೆಯ ಅಭಿವೃದ್ಧಿಗಾಗಿ 1 ಲಕ್ಷ 10 ಸಾವಿರ ಕೋಟಿ ರೂ, ಗಳ ಅನುದಾನ ತಂದಿದ್ದೇನೆ ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದರು.

ಅವರು ಸೋಮವಾರ ಪಟ್ಟಣದ ಸಿಂದಗಿ ರಸ್ತೆಯ ಧನಶೆಟ್ಟಿ ಮಂಗಲ ಕಾರ್ಯಾಲಯದಲ್ಲಿ ಹಮ್ಮಿಕೊಂಡ 984 ಕೋಟಿ ರೂ, ಗಳ 548–ಬಿ ರಾಷ್ಟ್ರೀಯ ಹೆದ್ದಾರಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ನನ್ನ 50 ವರ್ಷಗಳ ರಾಜಕೀಯ ಜೀವನಕ್ಕೆ ಇಂಡಿ ಜನತೆ ಜೀವ ತುಂಬಿದ್ದಾರೆ. ಅವರ ಋಣ ಮುಟ್ಟಿಸುವದಕ್ಕಾಗಿ ನನ್ನ ಜೀವ ಒತ್ತೆ ಇಟ್ಟು ಕೆಲಸ ಮಾಡುತ್ತಿದ್ದೇನೆ ಎಂದರು.

ಇಂಡಿ ಕಾಲುವೆಯ ರಿಪೇರಿಗಾಗಿ 2700 ಕೋಟಿ ರೂ, ಗಳ ಅನುದಾನಕ್ಕಾಗಿ ಪ್ರಧಾನ ಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಿದ್ದೇನೆ. ಇಷ್ಟರಲ್ಲಿಯೇ ಮಂಜೂರಾತಿ ಸಿಗುವ ವಿಶ್ವಾಸವಿದೆ ಎಂದರು.

ಇಂದು ಭೂಮಿಪೂಜೆ ನಡೆದ ಈ 984 ಕೋಟಿ ರೂ, ಗಳ ಅನುದಾನದ ಸುಮಾರು 102 ಕಿಮೀ ಉದ್ದದ ಹೆದ್ದಾರಿ ಕಾಮಗಾರಿ ಶೀಘ್ರವೇ ಪ್ರಾರಂಭಿಸಲಾಗುವದು. ಇದರಲ್ಲಿ 10 ಸೇತುವೆಗಳು ಬರಲಿದ್ದು, ಎಲ್ಲಾ ಕಾರ್ಯಗಳನ್ನು ಬೇಗನೇ ಮುಗಿಸಲು ಸೂಚನೆ ನೀಡಲಾಗಿದೆ ಎಂದರು.

ತಾಲ್ಲೂಕಿನ ಇಂಚಗೇರಿ, ಗುಡ್ಡಗಳಲ್ಲಿ ನೀರು ಸಂಗ್ರಹಿಸಿ, ತಾಲ್ಲೂಕಿನ ಎಲ್ಲಾ ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಮಾಡುವಂತೆ ಕ್ರಮ ಜರುಗಿಸಲಾಗಿದೆ. 120 ಕೋಟಿ ಅನುದಾನದಲ್ಲಿ 76 ಗ್ರಾಮಗಳಿಗೆ ಶುದ್ಧ ಕುಡಿಯುವ ನೀರಿಗಾಗಿ ಜಲಧಾರೆ ಯೋಜನೆ ಮಾಡಲಾಗಿದೆ. ಕೆಲಸ ಭರದಿಂದ ಸಾಗಿದೆ. ಭೀಮಾ ನದಿಯ ದಂಡೆಗೆ ಇರುವ ಗ್ರಾಮಗಳಿಗೂ ಕೂಡಾ ಕೃಷ್ಣಾ ಮೇಲ್ದಂಡೆ ಯೋಜನೆಯ ಜಲಧಾರೆ ಯೋಜನೆಯಿಂದ ಕುಡಿಯುವ ನೀರು ಒದಗಿಸಲಾಗುತ್ತದೆ ಎಂದರು. ಮಾಜಿ ವಿಧಾನ ಪರಿಷತ್ ಸದಸ್ಯ ಅರುಣ ಶಹಾಪೂರ, ಮಾಜಿ ಶಾಸಕ ರಮೇಶ ಬೂಸನೂರ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಬಿ.ಡಿ .ಪಾಟೀಲ, ಚಂದ್ರಶೇಖರ ಕವಟಗಿ, ಕಾಸುಗೌಡ ಬಿರಾದಾರ ಮಾತನಾಡಿದರು.

ವೇದಿಕೆಯಲ್ಲಿ ಬಿಜೆಪಿ ಪ್ರಮುಖರಾದ ಶ್ರೀಪತಿಗೌಡ ಬಿರಾದಾರ, ಶಂಕರಗೌಡ ಪಾಟೀಲ, ಮಲ್ಲಿಕಾರ್ಜುನ ಕಿವಡೆ, ಸಿದ್ದಲಿಂಗ ಹಂಜಗಿ, ಶೀಲವಂತ ಉಮರಾಣಿ, ಅಣ್ಣಪ್ಪ ಖೈನೂರ, ಸಂಜೀವ ಐಹೊಳೆ, ಬಿ.ಎಸ್. ಪಾಟೀಲ, ಶ್ರೀಶೈಲಗೌಡ ಬಿರಾದಾರ, ವಿವೇಕ ಡಬ್ಬಿ, ಉಮೇಶ ಕೋಳಕೂರ, ದೇವೇಂದ್ರ ಕುಂಬಾರ, ಅನೀಲಗೌಡ ಬಿರಾದಾರ, ಅನೀಲ ಜಮಾದಾರ, ಶರಣಗೌಡ ಬಂಡಿ, ಶ್ರೀಶೈಲಗೌಡ ಬಿರಾದಾರ, ವಿರಾಜ ಪಾಟೀಲ, ಎಸ್.ಜೆ. ವಾಲೀಕಾರ, ನಾಗುಗೌಡ ಪಾಟೀಲ (ಅಥರ್ಗಾ), ಪ್ರಕಾಶ ಹಿಟ್ನಳ್ಳಿ, ರವಿ ವಗ್ಗೆ, ರಾಘವೇಂದ್ರ ಕಾಪಸೆ, ಸಂಜು ದಶವಂತ, ಶಾಂತು ಕಂಬಾರ ಸೇರಿದಂತೆ ಇನ್ನಿತರರು ಇದ್ದರು.

ದೇವೇಂದ್ರ ಕುಂಬಾರ ಸ್ವಾಗತಿಸಿದರು. ಮಲ್ಲಿಕಾರ್ಜುನ ಕಿವುಡೆ ವಂದಿಸಿದರು.

### ಸಾಕ್ಷರತಾ ದಿನ ಆಚರಣೆಯಲ್ಲಿ ಜಿಲ್ಲಾ ಮತ್ತು ತರಬೇತಿ ಸಂಸ್ಥೆ ಉಪನಿರ್ದೇಶಕಿ ಉಮಾದೇವಿ ಸೊನ್ನದ ಹೇಳಿಕೆ

# ಅನಕ್ಷರಸ್ಥರನ್ನು ಸಾಕ್ಷರರನ್ನಾಗಿ ಮಾಡುವ ಕಾರ್ಯ ಯಶಸ್ವಿ




ವಿಜಯಪುರ: ನಗರದ ಕೇಂದ್ರ ಕಾರಾಗೃಹದಲ್ಲಿ ಸೆ.9ರಂದು ಅಂತರರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಕಾರ್ಯಕ್ರಮ ಆಚರಿಸಲಾಯಿತು.

ಜಿಲ್ಲಾ ಮತ್ತು ತರಬೇತಿ ಸಂಸ್ಥೆಯ ಉಪನಿರ್ದೇಶಕಿ ಶ್ರೀಮತಿ ಉಮಾದೇವಿ ಸೊನ್ನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಸಮಾಜದಲ್ಲಿಯ ಅನಕ್ಷರಸ್ಥರನ್ನು ಗುರುತಿಸಿ, ಅಕ್ಷರಸ್ಥರನ್ನಾಗಿ ಮಾಡುವ ಉಲ್ಲಾಸ್ ಎನ್‌ಐಎಲ್‌ಪಿ, 1000 ಸಂಪೂರ್ಣ ಗ್ರಾಮ ಪಂಚಾಯತಿ ಹಾಗೂ ಲಿಂಕ್ ಡಾಕ್ಯುಮೆಂಟ್ ಸಾಕ್ಷರತಾ ಕಾರ್ಯಕ್ರಮಗಳ ಮೂಲಕ ಸಾಕ್ಷರರನ್ನಾಗಿ ಮಾಡುವ ಕಾರ್ಯ ಅತ್ಯಂತ ಯಶಸ್ವಿಯಾಗಿ ನಡೆದಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೇಂದ್ರ ಕಾರಾಗೃಹದ ಅಧೀಕ್ಷಕ ಡಾ.ಐ.ಜೆ.ಮ್ಯಾಗೇರಿ ಮಾತನಾಡಿ, ಯಾವ ವ್ಯಕ್ತಿ ಜ್ಞಾನವೆಂಬ ಜ್ಯೋತಿಯನ್ನು ತನ್ನ ಜೀವನದಲ್ಲಿ ಬೆಳಗಿಸಿಕೊಳ್ಳುತ್ತಾನೋ ಆತನು ಸಮಾಜಕ್ಕೆ ತನ್ನದೇ ಆದ ವಿಶೇಷ ಕೊಡುಗೆ ನೀಡುತ್ತಾನೆ. ನಿಮ್ಮಿಂದಲೇ ಈ ಬಂಧಿಖಾನೆ ಎಂಬ ವಿಷಯ ಕೊನೆಯಾಗಬೇಕು, ನೀವೆಲ್ಲರೂ ನಿಮ್ಮ ಮಕ್ಕಳಿಗೆ ಶಿಕ್ಷಣ ನೀಡುವುದರ ಮುಖಾಂತರ ಸ್ವಸ್ಥಿರ ಸಮಾಜ ನಿರ್ಮಿಸಲು ಕೈಜೋಡಿಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದವರಿಗೆ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಸುರೇಶ ಕುಪ್ಪಿ ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿ, ಅನಕ್ಷರತೆ ಹೋಗಲಾಡಿಸಿ, ಪ್ರತಿಯೊಬ್ಬರನ್ನೂ ಸಾಕ್ಷರರನ್ನಾಗಿ ಮಾಡುವ ಸಂಕಲ್ಪ ನಾವೆಲ್ಲರೂ ಮಾಡೋಣ. ವಿದ್ಯಾವಂತ ಸಮುದಾಯದವರು ಅನಕ್ಷರಸ್ಥರಿಗೆ, ಅಕ್ಷರ ಜ್ಞಾನ ನೀಡುವ ಕೆಲಸವಾಗಬೇಕು. ಅಂದಾಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು. ಕೇಂದ್ರ ಕಾರಾಗೃಹದಲ್ಲಿ ಆಯೋಜಿಸಿದ ಸ್ಪರ್ಧೆಗಳಲ್ಲಿ ಭಾಗವಹಿಸಿದವರಿಗೆ ಬಹುಮಾನ ವಿತ–ರಿಸಲಾಯಿತು. ಹಾಗೂ ಅನಕ್ಷರಸ್ಥ ಕೈದಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು. ವೇದಿಕೆಯಲ್ಲಿ ಜೈಲರ್‌ಗಳಾದ ಎ.ಕೆ.ಅನ್ಸಾರಿ, ಜಿ.ಕೆ. ಕುಲಕರ್ಣಿ, ಶ್ರೀಮತಿ ಸವಿತಾ ಬೆಳ್ಳುಂಡಗಿ, ಶಿಕ್ಷಕರಾದ ಡಿ.ಎಸ್.ದಿಕ್ಷಿತ್, ಶ್ರೀಮತಿ ಸವಿತಾ ಕುಲಕರ್ಣಿ ಉಪಸ್ಥಿತರಿದ್ದರು.

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಗಳ ಸಿಬ್ಬಂದಿಗಳು, ಕಾರಾಗೃಹ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ಸಜಾ & ವಿಚಾರಣಾ ಬಂಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಜಿ.ಎಸ್.ಕಾಪಸೆ, ಸ್ವಾಗತಿಸಿದರು. ಸಜಾ ಬಂದಿ ಮೌನೇಶ ಮಾದರ ಸಾಕ್ಷರ ಗೀತೆಯನ್ನು ಹಾಡಿದರು, ಶ್ರೀಮತಿ ಶಖಿನಾ ನದಾಫ್ ಕಾರ್ಯಕ್ರಮ ನಿರೂಪಿಸಿದರು.

# ಕೋರವಾರದಲ್ಲಿ ಸಮರ್ಪಕ ವಿದ್ಯುತ್ ವ್ಯವಸ್ಥೆಗೆ ಆಗ್ರಹಿಸಿ ಪ್ರತಿಭಟನೆ



ದೇವರಹಿಪ್ಪರಗಿ: ಕೋರವಾರ ಸೇರಿದಂತೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯುತ್ ಕಣ್ಣಮುಚ್ಚಾಲೆಯಿಂದ ಸಾರ್ವಜನಿಕರು ಬೇಸತ್ತಿದ್ದು, ಕನಿಷ್ಠ ಸಿಂಗಲ್ ಫೇಸ್ ವಿದ್ಯುತ್ ಆದರೂ ನೀಡಿ ಅನುಕೂಲ ಮಾಡಿ ಕೊಡಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತಸಂಘ ಹಾಗೂ ಹಸಿರುಸೇನೆ ಪದಾಧಿಕಾರಿಗಳು ಪ್ರತಿಭಟನೆ ನಡೆಸಿ, ಮನವಿ ಸಲ್ಲಿಸಿದರು.

ಸೋಮವಾರ ಕೋರವಾರ ಗ್ರಾಮದ ಹೆಸ್ಕಾಂ ಕಚೇರಿಗೆ ಆಗಮಿಸಿದ ನೂರಾರು ರೈತರು ಹೆಸ್ಕಾಂ ವಿರುದ್ಧ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ತಾಲ್ಲೂಕು ಅಧ್ಯಕ್ಷ ಈರಪ್ಪ ಕುಳೇಕುಮಟಗಿ ಹಾಗೂ ಗೌರವಾಧ್ಯಕ್ಷ ಶಿವಾನಂದ ಹಿರೇಮಠ ಮಾತನಾಡಿ, ಹಲವಾರು ದಿನಗಳಿಂದ ವಿದ್ಯುತ್ ಕಣ್ಣು ಮುಚ್ಚಾಲೆಯಿಂದ ಸಾಕಾಗಿ ಹೋಗಿದೆ. ಗ್ರಾಮದಲ್ಲಿ ವಿದ್ಯುತ್ ಇಲ್ಲದೆ ಪರದಾಡುವಂತಾಗಿದೆ. ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿದ್ದು, ಹಿಟ್ಟಿನ ಗಿರಣಿ ಸೇರಿದಂತೆ ಗುಡಿಕೈಗಾ–ರಿಕೆಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ದಿನಕ್ಕೆ ನೂರಾರು ಸಲ ವಿದ್ಯುತ್ ಸ್ಥಗಿತಗೊಳ್ಳುವುದರಿಂದ ಮನೆಯಲ್ಲಿನ ವಿದ್ಯುತ್ ಉಪಕರಣಗಳು ಸುಟ್ಟು ಹೋಗುತ್ತಿವೆ. ಇನ್ನು ಜಮೀನುಗಳಲ್ಲಿ ನೀರು ಹರಿಸಲು ಸಹ ಸರಿಯಾಗಿ ವಿದ್ಯುತ್ ವ್ಯವಸ್ಥೆ ಇಲ್ಲದೆ ಮರಗುವಂತಾಗಿದೆ. ಹಲವಾರು ಬಾರಿ ಮನವಿ ಮಾಡಿದರೂ ಕೇವಲ ಹಾರಿಕೆ ಉತ್ತರ ಮಾತ್ರ ನೀಡುತ್ತಿದ್ದಾರೆ. ವಿದ್ಯುತ್ ಸಮಸ್ಯೆಯಿಂದ ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದ್ದು, ಸಾರ್ವಜನಿಕರು ಸಂಕಷ್ಟ ಹೆಚ್ಚಾಗಿದೆ. ಅದಕ್ಕಾಗಿ ಕನಿಷ್ಠ ಅಗತ್ಯಕ್ಕೆ ತಕ್ಕಂತೆ ವಿದ್ಯುತ್ ಒದಗಿಸಬೇಕು. ತೋಟಗಳಿಗೂ ವಿದ್ಯುತ್ ಸರಿಯಾಗಿ ನೀಡಬೇಕು. ವಿದ್ಯುತ್ ಪೂರೈಕೆ ವ್ಯವಸ್ಥೆ ಸರಿಯಾಗದಿದ್ದರೆ ಹೆಸ್ಕಾಂ ಕಚೇರಿಗೆ ಬೀಗ ಜಡಿದು ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ನಂತರ ಕೋರವಾರ ಹೆಸ್ಕಾಂ ಸಹಾಯಕ ಅಭಿಯಂತರ ಪಿ.ಆರ್.ಹಿರೇಮಠ ಇವರಿಗೆ ಮನವಿ ಸಲ್ಲಿಸಿದರು.

ರೈತರಾದ ಸುಭಾಷ ಸಜ್ಜನ, ದಾವಲಸಾಬ ಮಂದೇವಾಲ, ಸಂಗಪ್ಪಗೌಡ ಬಿರಾದಾರ, ಮಲ್ಲನಗೌಡ ಬಿರಾದಾರ, ಭೀಮನಗೌಡ ಬಿರಾದಾರ, ಮಂಹಾಂತಪ್ಪ ಕುಂಬಾರ, ರಾಮಸಿಂಗ್ ರಾಠೋಡ, ಶಂಕರ ರಾಠೋಡ, ಶಿವಪ್ಪ ಜಾಲವಾದಿ, ಬಾಬು ಚವ್ಹಾಣ, ಶ್ರೀಶೈಲ ತಾಳಿಕೋಟಿ, ಮಹಾದೇವಪ್ಪ ಹುಣಸಗಿ, ಮಲ್ಲಪ್ಪ ಸುಂಬಡ, ಲಕ್ಕಪ್ಪ ಹೂಗಾರ, ರಾಚಯ್ಯ ಹಿರೇಮಠ, ನಿಂಗನಗೌಡ ವಂದಗನೂರ ಸೇರಿದಂತೆ ವಿವಿಧ ಗ್ರಾಮಗಳ ಗ್ರಾಮಸ್ಥರು ಪಾಲ್ಗೊಂಡಿದ್ದರು.

## ಶಾಸಕ ಯಶವಂತರಾಯಗೌಡ ಪಾಟೀಲ ಅಧಿಕಾರಿಗಳಿಗೆ ಖಡಕ್ ಸೂಚನೆ

# ಸಾರ್ವಜನಿಕರ ಸಮಸ್ಯೆಗಳಿಗೆ ತುರ್ತಾಗಿ ಸ್ಪಂದಿಸಿ




ಇಂಡಿ: ಪಟ್ಟಣದ ಸ್ಟ್ರೀಟ್ ಲೈಟ್, ಯಜೆಡಿ, ಟ್ರಾಫಿಕ್, ಅರ್ಹ ಪಡಿತರ ಚೀಟಿ ಯೋಜನೆ, ಗ್ರಾಮೀಣ ಭಾಗದ ಕೆಟ್ಟ ರಸ್ತೆಗಳು, ಸರಕಾರಿ ಶಾಲೆಗಳ ಕಟ್ಟಡ ಸೋರಿಕೆ ಮತ್ತು ದುರಸ್ತಿ ಹಾಗೂ ತಾಲ್ಲೂಕಿನಲ್ಲಿ ಸಂಚರಿಸುವ ಸರಕಾರಿ ಬಸ್ಸುಗಳ ಸ್ಥಿತಿಗತಿ, ಅಕಾಲಿಕ ಮಳೆಯಿಂದ ಹಾನಿಯಾದ ಕೃಷಿ ತೋಟಗಾ–ರಿಕೆ ಹಾಗೂ ಗ್ಯಾರೆಂಟಿ ಯೋಜನೆ ಸೇರಿದಂತೆ ಆಲಿಸಿ, ಸಾರ್ವಜನಿಕ ಸಮಸ್ಯೆಗಳಿಗೆ ತುರ್ತು ಸ್ಪಂದಿಸಿ ಎಂದು ಅಧಿಕಾರಿಗಳಿಗೆ ಖಡಕಾಗಿ ಶಾಸಕ ಯಶವಂತರಾಯಗೌಡ ಪಾಟೀಲ ಸೂಚಿಸಿದರು.

ಸೋಮವಾರ ಪಟ್ಟಣದ ಮಿನಿ ವಿಧಾನಸೌಧ ಆವರಣದಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಅವರು ಮಾತನಾಡಿದರು.

ಅಲ್ಲದೆ ರೈತರ ಆತ್ಮಹತ್ಯ, ಜಾನುವಾರುಗಳ ಮರಣ ಪ್ರಕರಣಗಳಿಗೆ 15 ದಿನದಲ್ಲಿ ಪರಿಹಾರ ನೀಡಬೇಕು. ಆರು ತಿಂಗಳುಗಳ ಕಾಲ ಪರಿಹಾರ ನೀಡದಿದ್ದರೆ ಆ ಕುಟುಂಬದ ಪಾಡೇನಾಗುತ್ತದೆ ಎಂಬುದನ್ನು ಅಧಿಕಾರಿಗಳು ಅರ್ಥ ಮಾಡಿಕೊಳ್ಳಬೇಕು.

ತಾಲೂಕಿನಲ್ಲಿ 71876 ಮಹಿಳೆಯರು ಪ್ರತಿ ತಿಂಗಳು ರೂ 2000 ಹಣ ಪಡೆಯುತ್ತಿದ್ದು ಪ್ರತಿ ತಿಂಗಳು ಆ ಹಣ ಒಟ್ಟು 14 ಕೋಟಿ ವಿತರಣೆಯಾಗುತ್ತಿದ್ದು ಈ ವರೆಗೆ 11 ತಿಂಗಳಲ್ಲಿ 154 ಕೋಟಿ ರೂ ವಿತರಣೆ ಯಾಗಿದೆ ಎಂದು ಸಿಡಿಪಿಓ ತಿಳಿಸಿದರು.

ವಿದ್ಯುತ್ ಇಲಾಖೆಯಿಂದ ಒಟ್ಟು 41 ಸಾವಿರ ಮನೆಗಳಲ್ಲಿ 39 ಸಾವಿರ ಮನೆಗಳಿಗೆ ಒಟ್ಟು 06 ಕೋಟಿ ಮೌಲ್ಯದ ವಿದ್ಯುತ್ ಉಚಿತ ಮತ್ತು ತಾಲೂಕಿನಲ್ಲಿ 61 ಸಾವಿರ ಜನರಿಗೆ ಅಕ್ಕಿಯ ಹಣ ಕುರಿತು ಪ್ರತಿಯೊಬ್ಬರಿಗೆ ರೂ 170 ರಂತೆ 22 ಕೋಟಿ ರೂ ಹಣ ನೀಡಲಾಗುವದು ಎಂದು ಸಭೆಯಲ್ಲಿ ಸಂಬಂದಿತ ಅಧಿಕಾರಿಗಳು ಮತ್ತು ಶಾಸಕರು ತಿಳಿಸಿದರು. ಬಸ್ ನಿಲ್ದಾಣದಲ್ಲಿ ಡ್ರೈನೇಜ್ ನೀರು ಬರುತ್ತಿದ್ದು ಪುರಸಭೆಗೆ ಸಾಕಷ್ಟು ಬಾರಿ ಈ ಕುರಿತು ಮನವಿ ಮಾಡಿದರೂ ಕಾಳಜಿ ತೋರಿಲ್ಲ ಎಂದು ಘಟಕ ವ್ಯವಸ್ಥಾಪಕ ಬಿರಾದಾರ ದೂರಿದರು.ಕೆಡಿಪಿಗೆ ನೂತನವಾಗಿ ಆಯ್ಕೆಯಾದ ನಾಮನಿರ್ದೇಶಕ ಸದಸ್ಯರಿಗೆ ಸನ್ಮಾನಿಸಲಾಯಿತು.

ವೇದಿಕೆಯ ಮೇಲೆ ಎಸಿ ಅಬೀದ್ ಗದ್ಯಾಳ, ಜಿಪಂ ಉಪಕಾರ್ಯದರ್ಶಿ ವಿಜಯಕುಮಾರ ಆಜೂರ, ತಹಸೀಲ್ದಾರ ಬಿ.ಎಸ್. ಕಡಕಬಾವಿ, ಡಿ.ವಾಯ್. ಎಸ್.ಪಿ ಜಗದೀಶ ಎಚ್. ಎಸ್, ತಾಪಂ ಇಒ ಬಾಬು ರಾಠೋಡ, ಭೀಮು ಕವಲಗಿ, ಇಲಿಯಾಸ ಬೋರಾಮಣಿ, ಪ್ರಶಾಂತ ಕಾಳೆ, ಮಲ್ಲನಗೌಡ ಬಿರಾದಾರ ಮತ್ತಿತರರಿದ್ದರು. ಅಧಿಕಾರಿಗಳಾದ ಆರ್.ಎಸ್. ರುದ್ರವಾಡಿ, ಮಹಾಂತೇಶ ಹಂಗರಗಿ, ಮಹಾದೇವಪ್ಪ ಏವೂರ, ಎಚ್.ಎಸ್. ಪಾಟೀಲ, ಅರಣ್ಯ ಇಲಾಖೆಯ ಎಸ್.ಜಿ. ಸಂಗಾಲಕ, ಮಂಜುನಾಥ ಧೂಳೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಇಂಡಿ ತಾಲೂಕಿನಲ್ಲಿಯ ಯಾವುದಾದರೂ ಒಂದು ಗ್ರಾಮವನ್ನು ಸಾರಾಯಿ ಮುಕ್ತ ಮಾಡಿ ಅದು ಇತರ ಗ್ರಾಮಗಳಿಗೆ ಪ್ರೇರಣೆಯಾಗುತ್ತದೆ ಎಂದು ಅಬಕಾರಿ ಇಲಾಖಾ ಅಧಿಕಾರಿಗಳಿಗೆ ಶಾಸಕ ಯಶವಂತರಾಯಗೌಡ ಪಾಟೀಲರು ಸೂಚನೆ ನೀಡಿದರು. ಅದಕ್ಕೆ ಪೂರಕವಾಗಿ ಮಾತನಾಡಿದ ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ, ಸ್ಥಳೀಯ ಧರ್ಮಸ್ಥಳ ಸೇವಾ ಸಂಸ್ಥೆ ಮತ್ತು ಪೂಜ್ಯ ಶ್ರೀ ಅಮೃತಾನಂದ ಶ್ರೀಗಳ ಸಹಕಾರದಿಂದ ಯಾವುದಾದರೂ ಒಂದು ಗ್ರಾಮ ಗುರುತಿಸಿ ಬರುವ ಅಕ್ಟೋಬರ್ 2 ರಿಂದ ಸಾರಾಯಿ ಮುಕ್ತ ಗ್ರಾಮ ಮಾಡಲು ಕಾರ್ಯಯೋಜನೆ ರೂಪಿಸಲಾಗುವುದು ಎಂದರು.

ಈಗಗಲೇ ಮುರಮ–ವಿಜಯಪೂರ ರಾಷ್ಟ್ರೀಯ ಹೆದ್ದಾರಿ ಕಾಮಗಾ–ರಿಗೆ ಬೆಳಗಾವಿ ಜಿಲ್ಲೆಯಲ್ಲಿ ಕೇಂದ್ರ ಸಚಿವ ನಿತಿನ್ ಗಡ್ಕರಿ ಭೂಮಿಪೂಜೆ ನೆರವೇರಿಸಿದ್ದು, ಈಗ ಮತ್ತೆ ಅದೇ ರಾಷ್ಟ್ರೀಯ ಹೆದ್ದಾರಿಯ ಭೂಮಿ ಪೂಜೆ ಮಾಡುವುದು ಎಷ್ಟು ಸರಿ? ಈಗ ಅವರು ಮಾಡಿದ ಕಾರ್ಯಕ್ರಮ ಪ್ರೋಟೊಕಾಲ್ ಪ್ರಕಾರ ಇದೆಯೋ? ಹೇಗಿದೆ? ಅದನ್ನು ಕೂಡಲೆ ಪತ್ರ ಬರೆದು ಮಾಹಿತಿ ಪಡೆಯಲು ಶಾಸಕ ಯಶವಂತ್ರಾಯಗೌಡ ಅಧಿಕಾ–ರಿಗಳಿಗೆ ಸೂಚಿಸಿದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR